ಸಂಪುಟ : 9 ಸಂಚಿಕೆ 133 ಪುಟ : 4 ಬೆಲೆ: 3.00 ಶನಿವಾರ ಜೂನ್ 29 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 133 Pages : 4 Price : 3.00 Saturday June 29 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂನ್ 29ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 10 ಹೆಲ್ತ್ ಕ್ಯಾಂಪ್, ಕಬಾಡಿ ರಸ್ತೆ, ಪಾಲಾ ಬಾದಾಮಿ ರಸ್ತೆ, ಶಿರಹಟ್ಟಿ ಓಣಿ, ಕುರಹಟ್ಟಿ ಪೇಟೆ, ತೆಂಗಿನಕಾಯಿ ಬಜಾರ್, ಅಂಬಾ ಭವಾನಿ ಗುಡಿ ಲೈನ್. ವಾರ್ಡ್ ನಂ. 16 ರಹಮತ್ ನಗರ ಭಾಗ -1,2,3,4, ಗುಡದೂರ ಸ್ವಾಮಿ ಮಠ ಲೈನ್, ಕುಂಬೇಶ್ವರ ನಗರ ಭಾಗ -1,2,3,4, ಸುಣ್ಣದ ಭಟ್ಟಿ, ಕುಷ್ಟರೋಗ ಕಾಲೋನಿ, ಅಂಬೇಡ್ಕರ್ ನಗರ, ಅಬ್ಬಿಗೇರಿ ಲೈನ್, ಗಂಗಿಮಡಿ ಹೊಸ ಲೈನ್ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 34 ವಡ್ಡರಗೇರಿ 46 ಪ್ಲಾಟ್, ಮೂರು ಶಿಳ್ಳಿನ ವಕಾರ, ಡಂಬಳ ನಾಕಾ, ಡಿಪೋ ಹಿಂದಿನ ಭಾಗ ಪಾಠ ಶಾಲೆ, ಶಿವಾನಂದ ಗಾರ್ಡನ್, ಹೂಗಾರ ಪ್ಲಾಟ್, ಮಸೂತಿ ಭಾಗ -1,2. ವಾರ್ಡ್ ನಂ. 28 ಪಂಚಾಕ್ಷರಿ ನಗರ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಲ್ಲರ ಸಹಕಾರದಿಂದ ಚುನಾವಣೆ ಯಶಸ್ವಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಮೀಸಲು ಮತಕ್ಷೇತ್ರ ವ್ಯಾಪ್ತಿಯಲ್ಲಿ ಚುನಾವಣೆಗೆ ನಿಯೋಜನೆಗೊಂಡ ಸಹಾಯಕ ಚುನಾವಣಾಧಿಕಾರಿ ಸೇರಿದಂತೆ ಎಲ್ಲ ಸೆಕ್ಟರ್ ಆಫೀಸರ್‌ಗಳು ಮತ್ತು ಗ್ರಾಮ ಮಟ್ಟದಿಂದ ಹಿಡಿದು ತಾಲೂಕಾ ಮಟ್ಟದವರೆಗಿನ ಎಲ್ಲ ಸಿಬ್ಬಂದಿಗಳ ಸಹಕಾರದಿಂದ ಇತ್ತೀಚೆಗೆ ಲೋಕಸಭಾ ಚುನಾವಣೆ ಯಶಸ್ವಿಯಾಗಿ ನಡೆಯಿತು ಎಂದು ತಹಸೀಲ್ದಾರ ಅನಿಲ ಬಡಿಗೇರ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿಯ ಡಿ.ದೇವರಾಜು ಅರಸು ಭವನದಲ್ಲಿ ತಾಲೂಕಾಡಳಿತದ ವತಿಯಿಂದ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಕಾರ್ಯನಿರ್ವಹಿಸಿದ ಸಿಬ್ಬಂದಿಗಳಿಗೆ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರ ಸೂಕ್ತ ಮಾರ್ಗದರ್ಶನದಂತೆ ಸಹಾಯಕ ಚುನಾವಣಾಧಿಕಾರಿಯಾಗಿದ್ದ ಅಮಿತ್ ಬಿದರಿ ಅವರು ಮೇಲಾಧಿಕಾರಿಗಳ ಮತ್ತು ಆಯೋಗದ ನಿರ್ದೇಶನದಂತೆ ನಮಗೆ ಉತ್ತಮ ಮಾರ್ಗದರ್ಶನ ಮಾಡಿ ನಮ್ಮಿಂದ ಕೆಲಸವನ್ನು ಮಾಡಿಸಿ ಯಶಸ್ವಿಯಾದರು. ಹಲವು ಮೂಲ ಸೌಲಭ್ಯಗಳ ಕೊರತೆ ಇದ್ದರೂ ಸಹ ಇರುವ ಸೌಕರ್ಯಗಳಲ್ಲಿಯೇ ಎಲ್ಲಿಯೂ ಲೋಪವಾಗದೇ, ಯಾವುದೇ ಅಹಿತಕರ ಘಟನೆಗಳು ಜರುಗದ ರೀತಿಯಲ್ಲಿ ಕಳೆದ ವರ್ಷದ ವಿಧಾನಸಭಾ ಮತ್ತು ಇತ್ತೀಚೆಗೆ ಜರುಗಿದ ಲೋಕಸಭಾ ಚುನಾವಣೆಗಳನ್ನು ಯಶಸ್ವಿಯಾಗಿ ನಡೆಸಲಾಯಿತು ಎಂದರು.

ನಂತರ ತಾಲೂಕಾಡಳಿತದ ವತಿಯಿಂದ ಸಹಾಯಕ ಚುನಾವಣಾಧಿಕಾರಿಯಾಗಿದ್ದ ಜಿಲ್ಲಾ ಅಲ್ಪಸಂಖ್ಯಾತ ಕಲ್ಯಾಣಾಧಿಕಾರಿ ಅಮಿತ ಬಿದರಿ ಅವರನ್ನು ಸನ್ಮಾನಿಸಿ, ಸೆಕ್ಟರ್ ಅಧಿಕಾರಿಗಳಿಗೆ ಅಭಿನಂದನಾ ಪತ್ರ ವಿತರಿಸಲಾಯಿತು.

ಲಕ್ಷ್ಮೇಶ್ವರ ತಹಸೀಲ್ದಾರ ವಾಸುದೇವ ಸ್ವಾಮಿ, ಬಿಇಓ ನಾನಾಯ್ಕ, ಪ್ರಾಚಾರ್ಯ ಗಿರಿತಮ್ಮಣ್ಣವರ, ಎಂ.ಸಿ. ಭಜಂತ್ರಿ, ಎಂ.ಕೆ. ಲಮಾಣಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಡಿಸಿ ವೈಶಾಲಿ ಎಂ.ಎಲ್ ಅಧ್ಯಕ್ಷತೆಯಲ್ಲಿ ನರಗುಂದ ತಾಲೂಕು ಮಟ್ಟದ ಜನಸ್ಪಂದನ

# ರೈತರಿಗೆ ಶೀಘ್ರವೇ ಪರಿಹಾರ ತಲುಪಿಸಿ

■ವಿಜಯಸಾಕ್ಷಿ ಸುದ್ದಿ, ನರಗುಂದ

ಜನಸ್ಪಂದನ ಸಭೆಯಲ್ಲಿ ಬಂದಿರುವ ಅರ್ಜಿಗಳಲ್ಲಿ ಅರ್ಧದಷ್ಟು ಅರ್ಜಿಗಳು ಬೆಳೆ ಪರಿಹಾರ, ಕಿಸಾನ ಸಮ್ಮಾನ ಹಾಗೂ ಬೆಳೆ ವಿಮೆಗೆ ಸಂಬಂಧಿಸಿವೆ. ರೇಣುಕಾ ತರಕಾರ ಎಂಬ ರೈತ ಮಹಿಳೆ ಪರಿಹಾರ ಬಾರದ್ದರಿಂದ ಜಿಲ್ಲಾಧಿಕಾರಿಗಳ ಮುಂದೆ ಕಣ್ಣೀರು ಹಾಕಿದಾಗ, ನಿನ್ನೆಯಿಂದ ಪರಿಹಾರ 10 ಸಾವಿರ ರೂ ಹಾಕಲು ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಮ್.ಎಲ್ ಹೇಳಿದರು.

ಶುಕ್ರವಾರ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ನಡೆದ ತಾಲೂಕು ಮಟ್ಟದ ಜನಸ್ಪಂದನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಒಟ್ಟು 77 ಅರ್ಜಿಗಳು ಬಂದಿವೆ. ರೈತರಿಗೆ ಶೀಘ್ರದಲ್ಲಿ ಪರಿಹಾರ ತಲುಪಿಸುವಂತೆ ಕೆಲಸ ಮಾಡಬೇಕೆಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಚಿಕ್ಕನರಗುಂದ ಗ್ರಾ.ಪಂ ಮಾಜಿ ಅಧ್ಯಕ್ಷ ಮುತ್ತು ರಾಯರಡ್ಡಿ ಮಾತನಾಡಿ, ತಾಲೂಕಿನಲ್ಲಿರುವ ಮಲಪ್ರಭೆಯ ಎಲ್ಲಾ ಕಾಲುವೆಗಳಲ್ಲಿ ಹೂಳು ತುಂಬಿದ್ದು, ಕಾಲುವೆ ಪಕ್ಕದ ರಸ್ತೆಗಳಲ್ಲಿ ಕಂಟಿ ಬೆಳೆದಿದೆ, ರೈತರ ಜಮೀನುಗಳಿಗೆ ಹೋಗಲು ರಸ್ತೆ ಇಲ್ಲದಂತಾಗಿದೆ. ನೀರು ಬಂದರೆ ಜಮೀನಿಗೆ ತೆರಳಲಾರದ ಪರಿಸ್ಥಿತಿ ನಿರ್ಮಾಣವಾಗಿದೆ. ಕಾರಣ, ನೀರಾವರಿ ಇಲಾಖೆ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಲು ಮನವಿ ಮಾಡಿದರು.

ತಾಲೂಕಾಸ್ಪತ್ರೆಯಲ್ಲಿ ಹಾವು ಕಡಿತಕ್ಕೆ ಔಷಧವಿಲ್ಲದೇ ಹಲವಾರು ಜನ ಸಾವನ್ನಪ್ಪಿದ್ದಾರೆ. ಕೂಡಲೇ ಔಷಧ ಒದಗಿಸುವಂತೆ ಉರಗ ರಕ್ಷಕ ಬುಡ್ನೆಸಾಬ ಸುರೇಬಾನ ಒತ್ತಾಯಿಸಿದರು. ತಾಲೂಕಿನ ಪಶು ಆಸ್ಪತ್ರೆಯಲ್ಲಿ ವೈದ್ಯರು ಇಲ್ಲದಿರುವುದರಿಂದ ಜಾನುವಾರುಗಳಿಗೆ ಸೂಕ್ತ ಸಂದರ್ಭದಲ್ಲಿ ಚಿಕಿತ್ಸೆ ನೀಡಲು ಹೆಚ್ಚುವರಿ ವೈದ್ಯರನ್ನು ನೇಮಕ ಮಾಡಿಕೊಳ್ಳಬೇಕು, ಅಂಬಿಗರ ಚೌಡಯ್ಯ ವೃತ್ತದಲ್ಲಿ ಪುತ್ಥಳಿ ಸ್ಥಾಪನೆಗೆ ಸ್ಥಳವಕಾಶಕ್ಕೆ ಬೇಡಿಕೆ, ಮಹರ್ಷಿ ವಾಲ್ಮೀಕಿ ಭವನ ಕಟ್ಟಡ ಕಾಮಗಾರಿ ನಿರ್ಮಿತಿ ಕೇಂದ್ರದಿಂದ ಸ್ಥಗಿತಗೊಂಡಿದ್ದು, ಕೂಡಲೇ ಕಟ್ಟಡ ಕಾಮಗಾರಿ ಪ್ರಾರಂಭಿಸಲು ಮನವಿ, ರೈತ ಸ್ಮಾರಕ ಭವನಕ್ಕೆ ನಿವೇಶನ ನೀಡಲು ಹೀಗೆ ಹಲವಾರು ಸಮಸ್ಯೆಗಳ ಮನವಿಗಳು ಸಲ್ಲಿಕೆಯಾದವು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ್ರ, ಜಿ.ಪಂ ಸಿಇಓ ಭರತ್ ಎಸ್, ಡಿವೈಎಸ್‌ಪಿ ಪ್ರಭುಗೌಡ ಕಿರೇಗೌಡ್ರ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಕೆ. ಇನಾಮದಾರ್, ಹೆಚ್.ಬಿ. ಹುಲಗನ್ನವರ, ತಹಸೀಲ್ದಾರ ಶ್ರೀಶೈಲ ತಳವಾರ, ಪಿಎಸ್‌ಐ ಸವಿತಾ ಮುನ್ಯಾಳ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.




ಕೊಣ್ಣೂರ ಕೆಇಬಿ ಗ್ರಿಡ್‌ನಿಂದ ಚಿಕ್ಕನರಗುಂದ, ಹಿರೇಕೊಪ್ಪ, ಬೆನಕನಕೊಪ್ಪ ಗ್ರಾ.ಪಂ ವ್ಯಾಪ್ತಿಯಲ್ಲಿ ಬರುವ 6 ಹಳ್ಳಿಗಳಿಗೆ ಪೂರೈಕೆಯಾಗುತ್ತಿರುವ ವಿದ್ಯುತ್ತಿನಿಂದ ದಿನನಿತ್ಯ ಸಮಸ್ಯೆ ಅನುಭವಿಸುವ ಪರಿಸ್ಥಿತಿ ಎದುರಾಗಿದೆ. ಇದರ ಬದಲಾಗಿ ನರಗುಂದ ಗ್ರಿಡ್‌ನಿಂದ ಚಿಕ್ಕನರಗುಂದ, ಬೆನಕನಕೊಪ್ಪ, ಸಂಕಧಾಳ, ಅರಿಷಿನಗೋಡಿ, ಕುರುಗೋವಿನಕೊಪ್ಪ, ಹಿರೇಕೊಪ್ಪ ಗ್ರಾಮಗಳಿಗೆ ವಿದ್ಯುತ್ ಪೂರೈಕೆ ಮಾಡಬೇಕೆಂದು ಮುತ್ತು ರಾಯರಡ್ಡಿ ಆಗ್ರಹಿಸಿದರು.

ಜನಸ್ಪಂದನ ಸಭೆ ಪ್ರಾರಂಭದ ಮೊದಲೇ ವಿದ್ಯುತ್ ಕೈಕೊಟ್ಟಿತು. ಜಿಲ್ಲಾಧಿಕಾರಿಗಳು ಕತ್ತಲಲ್ಲೇ ಮೊಬೈಲ್ ಟಾರ್ಚ್ ಹಿಡಿದು ಸಭೆ ನಡೆಸಿದರು. ಸಭೆ ಮುಕ್ತಾಯಗೊಳಿಸಿ ಹೊರಹೋದ ನಂತರ ವಿದ್ಯುತ್ ಬಂದಿದೆ. ವಿದ್ಯುತ್ ಬೆಳಕು ಇಲ್ಲದ್ದಕ್ಕೆ ಸಾರ್ವಜನಿಕರು ಆಗಾಗ ಸಭೆಗೆ ವಿರೋಧ ವ್ಯಕ್ತಪಡಿಸಿದ ಪ್ರಸಂಗವೂ ಜರುಗಿತು.




### ಲೋಕಾಯುಕ್ತ ಡಿವೈಎಸ್‌ಪಿ ವಿಜಯ ಬಿರಾದಾರರಿಂದ ಅಹವಾಲು ಸ್ವೀಕಾರ

# 8 ಅರ್ಜಿಗಳು ಸ್ಥಳದಲ್ಲಿಯೇ ಇತ್ಯರ್ಥ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಪುರಸಭಾ ಭವನದಲ್ಲಿ ಶುಕ್ರವಾರ ಕರ್ನಾಟಕ ಲೋಕಾಯುಕ್ತ ಜಿಲ್ಲಾ ಘಟಕದಿಂದ ನಡೆದ ತಾಲೂಕು ಸಾರ್ವಜನಿಕ ಕುಂದುಕೊರತೆ ಮತ್ತು ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಲೋಕಾಯುಕ್ತ ಡಿವೈಎಸ್‌ಪಿ ವಿಜಯ ಬಿರಾದಾರ ಒಟ್ಟು 14 ಅರ್ಜಿಗಳು ಸ್ವೀಕರಿಸಿದರು.

ನಿಗದಿಯಂತೆ ಶುಕ್ರವಾರ ಬೆಳಿಗ್ಗೆ ಆರಂಭವಾದ ಸಭೆಗೆ ಪುರಸಭೆಯ 3 ಹಾಗೂ ತಹಸೀಲ್ದಾರ್ ಕಚೇರಿ ವ್ಯಾಪ್ತಿಯ 5 ಅರ್ಜಿಗಳು ಸೇರಿ ಒಟ್ಟು 14 ಅರ್ಜಿಗಳನ್ನು ಸಾರ್ವಜನಿಕರು ನೀಡಿದರು. ಮನವಿ ಹಾಗೂ ದೂರುಗಳನ್ನು ಸ್ವೀಕರಿಸಿದ ಲೋಕಾಯುಕ್ತ ಡಿವೈಎಸ್‌ಪಿ ವಿಜಯ ಬಿರಾದಾರ ಸ್ಥಳದಲ್ಲಿಯೇ 8 ಅರ್ಜಿಗಳನ್ನು ವಿಲೇವಾರಿ ಮಾಡಿ ಇನ್ನುಳಿದ 6 ಅರ್ಜಿಗಳಿಗೆ ದೂರು ನೀಡುವಂತೆ ಸೂಚಿಸಿದರು.

ಸಾರ್ವಜನಿಕರು ಸರ್ಕಾರಿ ಕಚೇರಿಗಳನ್ನು ಅಲೆಯಬಾರದು ಎಂದು ಸರ್ಕಾರ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಸ್ಥಳೀಯ ಕಚೇರಿಗಳಿಗೆ ಕಳುಹಿಸಿ ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರ ಒದಗಿಸಲು ಶ್ರಮಿಸುತ್ತಿದೆ. ಆದರೆ ಸ್ಥಳೀಯ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಇಂತಹ ಕಾರ್ಯಕ್ರಮಗಳ ಬಗ್ಗೆ ಜಾಗೃತಿ ಹಾಗೂ ಮಾಹಿತಿ ನೀಡಲು ಹಿಂಜರಿಯುತ್ತಿರುವುದು ವಿಪರ್ಯಾಸ ಎಂದು ನಾಗರಿಕರು ಬೇಸರಿಸಿದರು.

ಈ ವೇಳೆ ಲೋಕಾಯುಕ್ತ ಸಿಪಿಐ ರವಿ ಪುರುಷೋತ್ತಮ, ಲೋಕಾಯುಕ್ತ ಇನ್ಸ್‌ಪೆಕ್ಟರ್ ಶಾಹುಬಾಯಿ ತೇಲಿ, ತಾ.ಪಂ ಇಓ ಬಸವರಾಜ ಬಡಿಗೇರ, ಪ್ರಭಾರಿ ಮುಖ್ಯಾಧಿಕಾರಿ ಬಸವರಾಜ ಬಳಗಾನೂರ ಸೇರಿ ತಾಲೂಕು ಮಟ್ಟದ ಅಧಿಕಾರಿಗಳು ಬಾಗವಹಿಸಿದ್ದರು.




ಪಟ್ಟಣ ಸೇರಿ ಗ್ರಾಮೀಣ ಭಾಗದ ಜನರಿಗಷ್ಟೇ ಅಲ್ಲದೆ, ಚುನಾಯಿತ ಪ್ರತಿನಿಧಿಗಳು ಹಾಗೂ ಸಂಘಟನೆಗಳ ಬಹುತೇಕ ಮುಖಂಡರಿಗೆ ಲೋಕಾಯುಕ್ತರು ಪುರಸಭೆಗೆ ಆಗಮಿಸಲಿದ್ದಾರೆ ಎನ್ನುವ ಮಾಹಿತಿ ಸಿಕ್ಕಿರಲಿಲ್ಲ ಎನ್ನುವುದು ವಿಪರ್ಯಾಸ. ಪರಿಣಾಮ, ಕರ್ನಾಟಕ ಲೋಕಾಯುಕ್ತ ಜಿಲ್ಲಾ ಘಟಕದಿಂದ ನಡೆದ ತಾಲೂಕು ಸಾರ್ವಜನಿಕ ಕುಂದು-ಕೊರತೆ ಮತ್ತು ಅಹವಾಲು ಸ್ವೀಕಾರ ಕಾರ್ಯಕ್ರಮಕ್ಕೆ ಬೆರಳಣಿಕೆ ಅರ್ಜಿಗಳು ಬಂದಿದ್ದು ಕೆಲ ಅಧಿಕಾರಿಗಳಿಗೆ ಅಚ್ಚರಿ ಮೂಡಿಸಿದೆ.

### ಎಸ್.ಟಿ ಸಮುದಾಯಕ್ಕೆ ನ್ಯಾಯ ಒದಗಿಸುವಂತೆ ಬಿಜೆಪಿ ಎಸ್.ಟಿ ಮೋರ್ಚಾ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ

# ನೈತಿಕ ಹೊಣೆ ಹೊತ್ತು ಸಿಎಂ ರಾಜೀನಾಮೆ ನೀಡಲಿ

■ವಿಜಯಸಾಕ್ಷಿ ಸುದ್ದಿ, ಗದಗ

ವಾಲ್ಮೀಕಿ ನಿಗಮದಲ್ಲಿ ಸರಕಾರಿ ಹಣದ ವರ್ಗಾವಣೆಯ ಗೋಲ್‌ಮಾಲ್, ಪರಿಶಿಷ್ಟ ಪಂಗಡದ ಅನುದಾನದ 187 ಕೋಟಿ ರೂ. ಸಂಶಯಾತ್ಮಕ ಖಾತೆಗಳಿಗೆ ವರ್ಗಾವಣೆ ಮಾಡಿ ದುರ್ಬಳಕೆ ಮಾಡಿಕೊಂಡಿರುವ ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಎಸ್.ಟಿ ಮೋರ್ಚಾ ವತಿಯಿಂದ ಶುಕ್ರವಾರದಂದು ಗದಗ ನಗರದಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿ ಎದುರು ಬೃಹತ್ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಲಾಯಿತು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಪರಿಶಿಷ್ಟ ಪಂಗಡದ ಅನುದಾನ 187 ಕೋಟಿ ರೂ ಸಂಶಯಾತ್ಮಕ ಖಾತೆಗೆ ವರ್ಗಾವಣೆ ಮಾಡಿ ವಾಲ್ಮೀಕಿ ನಿಗಮದಲ್ಲಿ ಸರ್ಕಾರಿ ಹಣವನ್ನು ಕಾಂಗ್ರೆಸ್ ಪಕ್ಷದ ಚುನಾವಣಾ ವೆಚ್ಚಕ್ಕೆ ಬಳಕೆ ಮಾಡಿಕೊಂಡಿರುವ ಆರೋಪವಿದೆ. ಕಾಂಗ್ರೆಸ್ ಸರ್ಕಾರದ ಅವ್ಯವಹಾರದಿಂದ ಮನನೊಂದ ವಾಲ್ಮೀಕಿ ನಿಗಮದ ಅಧೀಕ್ಷಕ ಚಂದ್ರಶೇಖರ ಡೆತ್‌ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡರು. ಈ ಪ್ರಕಣದ ನೈತಿಕ ಹೊಣೆ ಹೊತ್ತು ಸಿಎಂ ಸಿದ್ದರಾಮಯ್ಯನವರು ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸಿದರು.




ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೊಟಪ್ಪ(ರಾಜು) ಕುರುಡಗಿ ಮಾತನಾಡಿ, ಬಿಜೆಪಿ ಆಡಳಿತ ಅವಧಿಯಲ್ಲಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಎಸ್.ಸಿ, ಎಸ್.ಸಿ/ಟಿ.ಎಸ್.ಪಿ ಯೋಜನೆಗಳಿಗೆ 28234 ಕೋಟಿ ರೂ ಮೀಸಲಿಟ್ಟಿತ್ತು. ಕಾಂಗ್ರೆಸ್ ಸರ್ಕಾರ ಬಂದ ಒಂದೇ ವರ್ಷದಲ್ಲಿ ಎಸ್.ಟಿ ನಿಗಮಗಗಳಲ್ಲಿ ಅವ್ಯವಹಾರ ಮಾಡುತ್ತಾ ಎಸ್.ಸಿ/ಎಸ್.ಟಿ, ಹಿಂದುಳಿದ ವರ್ಗಗಳಿಗೆ ಕಾಂಗ್ರೆಸ್ ಸರ್ಕಾರ ಅನ್ಯಾಯ ಮಾಡುತ್ತಿದೆ. ಸಚಿವ ನಾಗೇಂದ್ರ ಅವರ ರಾಜೀನಾಮೆ ಪರಿಹಾರವಲ್ಲ. ರಾಜ್ಯದ ಜನತೆಗೆ ಗ್ಯಾರಂಟಿ ಎಂಬ ನೆಪವೊಡ್ಡಿ ಎಸ್.ಸಿ/ಟಿ. ಎಸ್.ಪಿ ಹಣ ದುರ್ಬಳಕೆ ಮಾಡಿಕೊಳ್ಳವುದಲ್ಲದೇ ವಾಲ್ಮೀಕಿ ನಿಗಮದ ಹಣವನ್ನು ಕೂಡಾ ದುರ್ಬಳಕೆ ಮಾಡಿಕೊಂಡು ಅಧಿಕಾರಿಗಳ ಸಾವಿಗೆ ಕಾರಣವಾಗುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ಈಗಾಗಲೇ ರಾಜ್ಯದ ಜನತೆ ಬುದ್ಧಿ ಕಲಿಸಿದ್ದಾರೆ ಎಂದರು.

ಎಸ್.ಟಿ. ಮೋರ್ಚಾ ಗದಗ ಜಿಲ್ಲಾಧ್ಯಕ್ಷ ಈಶ್ವರಪ್ಪ ರಂಗಪ್ಪನವರ ಮಾತನಾಡಿ, ರಾಜ್ಯದಲ್ಲಿ ನಮ್ಮ ಸಮುದಾಯಕ್ಕೆ ಅನ್ಯಾಯ ಮಾಡಿರುವ ಕಾಂಗ್ರೆಸ್ ಸರ್ಕಾರ ಈ ಸರ್ವಾಧಿಕಾರಿ ಧೋರಣೆಗೆ ತಕ್ಕ ಪಾಠವನ್ನು ಸಮುದಾಯ ಕಲಿಸುತ್ತದೆ. ಈ ಅವ್ಯವಹಾರಕ್ಕೆ ಸಂಬಂಧಿಸಿ, ನೈತಿಕ ಹೊಣೆ ಹೊತ್ತು ಸರ್ಕಾರವನ್ನು ವಿಸರ್ಜಿಸಬೇಕು ಎಂದರು.

ಪ್ರತಿಭಟನೆಯ ಸಂದರ್ಭದಲ್ಲಿ ಮುಖಂಡರಾದ ಉಮೇಶಗೌಡ ಪಾಟೀಲ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಪಕ್ಕಿರೇಶ ರಟ್ಟಿಹಳ್ಳಿ, ಆರ್.ಕೆ. ಚವ್ಹಾನ, ಪ್ರಮುಖರಾದ ಎಂ.ಎಸ್. ಕರೀಗೌಡ್ರ, ಜಗನ್ನಾಥಸಾ ಭಾಂಡಗೆ, ಈಶಪ್ಪ ನಾಯ್ಕರ, ಎಚ್.ಕೆ. ಹಟ್ಟಿಮನಿ, ಉಷಾ ಮಹೇಶ ದಾಸರ, ವಿನಾಯಕ ಮಾನ್ವಿ, ಅನಿಲ ಅಬ್ಬಿಗೇರಿ, ಮುತ್ತಣ್ಣ ಕಡಗದ, ರವಿ ಕರಿಗಾರ, ನಿಂಗಪ್ಪ ಮಣ್ಣೂರ, ಮುತ್ತಣ್ಣ ಜಂಗಣ್ಣವರ, ವಾಯ್.ಪಿ. ಅಡ್ನೂರ, ಯಲ್ಲಪ್ಪ ಶೇರಿ, ಬೂದಪ್ಪ ಹಳ್ಳಿ, ಭದ್ರೇಶ ಕುಸ್ಲಾಪೂರ, ಮುತ್ತಪ್ಪ ಮೂಲಿಮನಿ, ನಾಗರಾಜ ತಳವಾರ, ಸಿದ್ದು ಪಲ್ಲೇದ, ಗಂಗಾಧರ ಹಬೀಬ, ದೇವಪ್ಪ ಗೊಟೂರ, ರಾಘವೇಂದ್ರ ಯಳವತ್ತಿ, ಮಾಧುಸಾ ಮೇರವಾಡೆ, ಲಕ್ಷ್ಮೀ ಶಂಕರ ಕಾಕಿ, ಮುತ್ತು ಮುಶಿಗೇರಿ, ಅಶೋಕ ಸಂಕಣ್ಣವರ, ಸುರೇಶ ಚಿತ್ತರಗಿ, ಅಶೋಕ ಕರೂರ, ವೆಂಕಟೇಶ ಕೊಣಿ, ಮಂಜುನಾಥ ತಳವಾರ, ವಸಂತ ಮೇಟಿ, ಅಶೋಕ ನವಲಗುಂದ, ಮಾಂತೇಶ ನಲವಡಿ, ಶಿವು ಹಿರೇಮನಿಪಾಟೀಲ, ಇರ್ಷಾದ ಮಾನ್ವಿ, ನಾಗರಾಜ ಕುಲಕರ್ಣಿ, ಗೊವಿಂದರಾಜ ಪೂಜಾರ, ಸಂತೋಷ ಅಕ್ಕಿ, ನಿರ್ಮಲಾ ಕೊಳ್ಳಿ, ಬಸವರಾಜ ಹರ್ಲಾಪೂರ, ಬಸವರಾಜ ಬಡಿಗೇರ, ಮಹೇಶ ಶಿರಹಟ್ಟಿ, ಮಾರುತಿ ನಾಗರಳ್ಳಿ, ಪ್ರವೀಣ ಶಂಕಿನದಾಸರ, ಮಂಜುನಾಥ ಮುಳಗುಂದ, ಮೇಗರಾಜ ನಾಯಕ, ಮಾಂತೇಶ ಬಾತಾಖಾನಿ, ಅಯ್ಯಪ್ಪ ಅಂಗಡಿ, ಶರಣಪ್ಪ ಚಿಂಚಲಿ, ರತ್ನಾ ಕುರಗೊಡ, ರೇಖಾ ಬಂಗಾರಶೆಟ್ಟರ, ಅಪ್ಪಣ್ಣ ಟೆಂಗಿನಕಾಯಿ, ಕೆ.ಪಿ.ಕೋಟಿಗೌಡ್ರ, ಪರಶು ಪರಾಪೂರ, ಭಗನ ರಾಜಪುರೊಹಿತ, ಲಕ್ಷ್ಮಣ ಬೂದಿಹಾಳ, ಮಂಜುನಾಥ ಯಲಿಶಿರುರ, ಬಸವಂತಪ್ಪ ತಳವಾರ, ಯಲ್ಲಪ್ಪ ತಳವಾರ, ಲಕ್ಷ್ಮಣ ರಣತೂರ, ರಂಗಪ್ಪ ಯರಗೂಡಿ, ಪಾರಿಶನಾಥ ಮೆಲಾಣಿ, ವೀರಸಂಗಯ್ಯ ಮೊಕಾಶಿ, ಜಯಶ್ರೀ ಪಾಟೀಲ, ಜಯಶ್ರೀ ಅಣ್ಣಿಗೇರಿ ಮುಂತಾದವರು ಉಪಸ್ಥಿತರಿದ್ದರು.

## ಸಂಪಾದಕೀಯ

# ಒಂದೊಳ್ಳೆ ರಾಜಕೀಯ ಹೆಜ್ಜೆ

ರಾಜ್ಯದ ನೂತನ ಸಂಸದರ ಜೊತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ದೆಹಲಿಯಲ್ಲಿ ಸಭೆ ನಡೆಸಿರುವುದು ಒಂದೊಳ್ಳೆ ರಾಜಕೀಯ ಹೆಜ್ಜೆ ಎನ್ನಬಹುದು. ಕೇಂದ್ರದಲ್ಲಿ ಸುಸ್ಥಿರ ಸರಕಾರ ರಚನೆಯಾದ ನಂತರ ರಾಜ್ಯ ಸರಕಾರವೇ ಮುಂದಾಗಿ ಕೇಂದ್ರದಲ್ಲಿರುವ ರಾಜ್ಯದ ಸಂಸದರನ್ನು ಒಗ್ಗೂಡಿಸಿಕೊಂಡು ಸಭೆ ನಡೆಸಿದ್ದು ಅಭಿವೃದ್ಧಿ ರಾಜಕಾರಣವನ್ನು ಪ್ರತಿಬಿಂಬಿಸುತ್ತದೆ.

ರಾಜ್ಯದ ಹಿತಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರಕಾರದ ಮಧ್ಯೆ ಸಮನ್ವಯ ಅಗತ್ಯ. ಆದರೆ ಬಹುತೇಕ ಸಂದರ್ಭದಲ್ಲಿ ಸಮನ್ವಯ ಸಾಧ್ಯವಾಗುವುದಿಲ್ಲ. ಆ ಸಮನ್ವಯತೆ ಸಾಧಿಸಲು ರಾಜ್ಯದ ಸಂಸದರ ಪಾತ್ರ ಅಪಾರವಾಗಿದೆ. ಜೊತೆಗೆ ರಾಜ್ಯದ ಹಿತ ಕಾಪಾಡುವ ಬಹುದೊಡ್ಡ ಹೊಣೆಗಾರಿಕೆಯೂ ರಾಜ್ಯದ ಸಂಸದರ ಮೇಲಿದೆ.

ಕಳೆದ 10 ವರ್ಷಗಳಲ್ಲಿ ರಾಜ್ಯವನ್ನು ಪ್ರತಿನಿಧಿಸಿದ ಸಂಸದರು ರಾಜ್ಯದ ಹಿತಾಸಕ್ತಿ ಬಗ್ಗೆ ಧ್ವನಿ ಎತ್ತಿರುವುದನ್ನು ಯಾರೊಬ್ಬರೂ ಕಂಡಿಲ್ಲ. ರಾಜ್ಯದ ಹಿತಾಸಕ್ತಿ ಬಿಡಿ, ಕನಿಷ್ಠ ಸಂಸತ್ತಿನಲ್ಲಿ ಒಂದೇ ಒಂದು ಪ್ರಶ್ನೆ ಕೇಳಿಲ್ಲ. ಮಸೂದೆ ಕುರಿತಾಗಿ ಚರ್ಚೆಯಲ್ಲಿ ಭಾಗಿಯೂ ಆಗಿಲ್ಲ. ಅಂಥ ಸಂಸದರು ಪೈಕಿ ಕೆಲವರು ಸಂಸತ್ತಿನಿಂದ ದೂರವಾಗಿದ್ದಾರೆ. ಇನ್ನು ಕೆಲವರು ಮತ್ತೊಂದು ಅವಧಿಗೆ ಮುಂದುವರಿದಿದ್ದಾರೆ.

ಇರಲಿ, ಆದರೆ ಸದ್ಯ ಸಿದ್ದರಾಮಯ್ಯ ಆಯೋಜಿಸಿರುವ ಸಭೆಯ ಬಗ್ಗೆ ಪ್ರಸ್ತಾಪಿಸುವುದಾದರೆ, ಇದೊಂದು ಒಳ್ಳೆಯ ಬೆಳವಣಿಗೆ. ರಾಜಕೀಯ ಕಾರಣಗಳಿಗಾಗಿ ರಾಜ್ಯ ಸರಕಾರದ ಮನವಿಯನ್ನು ಕೇಂದ್ರ ಸರಕಾರ ತಿರಸ್ಕರಿಸಬಹುದು. ರಾಜ್ಯದ ಸಂಸದರು ರಾಜ್ಯದ ಹಿತಾಸಕ್ತಿ ವಿಷಯದಲ್ಲಿ ಉದಾಸೀನ ಮಾಡಬಹುದು ಅಥವಾ ರಾಜ್ಯ ಸರಕಾರದ ನಿರೀಕ್ಷೆ ಮೀರಿ ಒಳ್ಳೆಯ ಸ್ಪಂದನೆಯನ್ನೂ ಕೊಡಬಹುದು. ಪರಿಣಾಮ ಏನೇ ಇರಲಿ. ಆದರೆ ಅಭಿವೃದ್ಧಿ ರಾಜಕಾರಣಕ್ಕಾಗಿ ಇಂಥದ್ದೊಂದು ಸಭೆ ಆಯೋಜನೆಗೊಂಡಿರುವುದು ಒಳ್ಳೆಯ ಲಕ್ಷಣ ಎನ್ನಬಹುದು.

ಮುಖ್ಯವಾಗಿ ರಾಜ್ಯದ ನೆಲ, ಜಲ, ಭಾಷೆ ವಿಚಾರದಲ್ಲಿ ರಾಜ್ಯದ ಸಂಸದರು ದಕ್ಷಿಣ ಭಾರತದ ಇನ್ನಿತರ ರಾಜ್ಯಗಳ ಸಂಸದರನ್ನು ಮಾದರಿಯಾಗಿಸಿಕೊಳ್ಳಬೇಕು. ಅದೇ ರೀತಿ ಮೇಕೆದಾಟು, ರಾಯಚೂರಿಗೆ ಏಮ್ಸ್, ಬರ ಪರಿಹಾರ, ರಾಜ್ಯದ ಕರಾವಳಿ ಭಾಗದ ಅಭಿವೃದ್ಧಿ, ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಒತ್ತು, ಉತ್ತರ ಕರ್ನಾಟಕ ಭಾಗದ ಮಹದಾಯಿ ಯೋಜನೆ ಜಾರಿಗೆ ಪ್ರಯತ್ನಗಳು, ರಾಜ್ಯದ ರೈಲ್ವೆ ಯೋಜನೆಗಳಿಗೆ ಅನುಮೋದನೆ, 16ನೇ ಹಣಕಾಸು ಆಯೋಗದ ಮೇಲೆ ಒತ್ತಡ ಹಾಕಿ ಹೆಚ್ಚಿನ ಅನುದಾನ ತರುವುದು ಸೇರಿದಂತೆ ರಾಜ್ಯದ ಅನೇಕ ಸಮಸ್ಯೆಗಳ ಪರಿಹಾರಕ್ಕೆ ಸಂಸದರು ಮುಂದಾಗಬೇಕಿದೆ.

ಅದರ ಜೊತೆಗೆ ರಾಜ್ಯ ಸರಕಾರವೂ ಸಕಾರಾತ್ಮಕ ಸ್ಪಂದನೆ ನೀಡಬೇಕಿದೆ. ಅಂದಾಗ ಮಾತ್ರ ಸಭೆ ನಡೆಸಿದ್ದಕ್ಕೂ, ಸಂಸದರ ಪ್ರಯತ್ನಕ್ಕೂ ಒಂದು ಅರ್ಥ ಬರುತ್ತದೆ. ಅಭಿವೃದ್ಧಿ ರಾಜಕಾರಣ ಗರಿಗೆದರುತ್ತದೆ.


## ವಾಸ್ತವವನ್ನು ಅರಹುವ ಬರಗೂರರ ಕಥಾನಕ

# 'ಕಾಗೆ ಕಾರುಣ್ಯದ ಕಣ್ಣು'

'ಆಡು ಮುಟ್ಟದ ಸೊಪ್ಪಿಲ್ಲ, ಬರಗೂರು ರಾಮಚಂದ್ರಪ್ಪ ಬರೆಯದ ವಿಷಯಗಳಿಲ್ಲ' ಎಂಬ ಮಾತು ಅವರ ಆಯ್ದ ಅನುಭವಗಳ ಕಥನವನ್ನು ಓದಿದಾಗ ನೆನಪಾಗುತ್ತದೆ. ತಮ್ಮ ಆತ್ಮ ಕಥೆಯನ್ನು ಬರೆಯುವುದರ ಬದಲಾಗಿ ತಮ್ಮ ಅನುಭವಗಳ ಕಥನವನ್ನು ಹೇಳಿದ್ದೇನೆ ಎನ್ನುವ ಬರಗೂರು ಅವರ ಮಾತು ಪುಸ್ತಕವನ್ನು ಓದಿದಾಗ ಹೌದೆನ್ನಿಸುತ್ತದೆ. ಎಲ್ಲಿಯೂ ಆತ್ಮ ರತಿಗೆ ಒಳಗಾಗದೆ ಅವರು ಕಥನವನ್ನು ಹೇಳಿಕೊಂಡು ಹೋಗುವ ರೀತಿ ಮನಸ್ಸಿಗೆ ಹಿಡಿಸುತ್ತದೆ. ಓದಲೆಂದು ಕೈಗೆತ್ತಿಕೊಂಡ ಪುಸ್ತಕವನ್ನು ಕೆಳಗಿಡದಂತೆ ಓದಿಸಿಕೊಂಡು ಹೋಗುತ್ತದೆ.

ಬರಗೂರು ತಮ್ಮ ಬಾಲ್ಯದಿಂದ ಹಿಡಿದು ಈವರೆಗೆ ಸಾಗಿ ಬಂದಿರುವ ಎಲ್ಲ ಅನುಭವಗಳನ್ನೂ ಈ ಕಥನದಲ್ಲಿ ವಿವರಿಸಿದ್ದಾರೆ. ತಮ್ಮ ಮನೆತನದ ಪರಿಸ್ಥಿತಿ, ಓದಲು ಇದ್ದ ಅಡಚಣೆ, ಕಠಿಣವಾಗಿದ್ದ ಆರ್ಥಿಕ ಪರಿಸ್ಥಿತಿ, ಇದೆಲ್ಲವನ್ನೂ ಮೀರಿ ತಮ್ಮ ವರ್ಗ ಸಂಘರ್ಷವನ್ನೂ ಸಹ ಬಿಡದಂತೆ ಅವರು ವಿವರಿಸಿದ್ದಾರೆ. ಹೀಗೆ ವಿವರಿಸುವಾಗ ಎಲ್ಲಿಯೂ ತಮ್ಮ ಎಲ್ಲೆಯನ್ನು ಮೀರಿ ಅವರು ಬರೆದಿಲ್ಲ ಎಂಬುದು ಸ್ಪಷ್ಟವಾಗಿ ಕಾಣಿಸುತ್ತದೆ. ಕೆಳ ವರ್ಗದ ಹುಡುಗನೊಬ್ಬ ಶಾಲಾ ಅಭ್ಯಾಸದಲ್ಲಿ ಅತ್ಯಂತ ಜಾಣನಾಗಿದ್ದು, ಎಲ್ಲ ಸಂಕಷ್ಟಗಳನ್ನೂ ಮೆಟ್ಟಿ ನಿಂತು ಎಂ.ಎ.ವರೆಗೆ ಓದಿದ್ದು ಆಗಿನ ಕಾಲದಲ್ಲಿ ಸಣ್ಣ ಸಾಧನೆಯೇನಲ್ಲ. ತಮ್ಮ ಓದಿನ ಬಗ್ಗೆ ಒಂದು ನಿರ್ದಿಷ್ಟ ಗುರಿಯನ್ನಿರಿಸಿಕೊಂಡಿದ್ದ ರಾಮಚಂದ್ರಪ್ಪನವರು ಎಲ್ಲ ಕಷ್ಟಗಳನ್ನೂ ಸಹಿಸಿ, ಎದುರಿಸಿ ತಮ್ಮ ಅಭ್ಯಾಸವನ್ನು ಮುಗಿಸಿ ಉಪನ್ಯಾಸಕ ಹುದ್ದೆಯನ್ನು ಪಡೆಯುವವರೆಗಿನ ವಿಷಯಗಳೆಲ್ಲವೂ ಪರದೆಯ ಮೇಲೆ ಓಡುವ ಚಿತ್ರಗಳಂತೆ ಹಾಗೇ ಸಾಗಿ ಬರುತ್ತವೆ. ಅವರ ಈ ವಿವರಗಳನ್ನು ಓದುತ್ತ ಹೋದಂತೆ ಅಲ್ಲಲ್ಲಿ ಕಣ್ಣಂಚಿನಲ್ಲಿ ನೀರು ಜಿನುಗುತ್ತದೆ. ಅವರ ಸ್ಥಿತಿಯನ್ನು ಕಂಡು ಜೀವ ಮಮ್ಮಲ ಮರುಗುತ್ತದೆ.

ತಮ್ಮೂರು ಬರಗೂರು ಅದ್ಹೇಗೆ ತಮ್ಮ ಬಾಲ್ಯದಲ್ಲಿ ತಮ್ಮ ಮೇಲೆ ಅಗಾಧವಾದ ಪ್ರಭಾವ ಬೀರಿತು ಎಂಬುದನ್ನು ಪುಸ್ತಕದಲ್ಲಿ ಬರಗೂರು ಸೊಗಸಾಗಿ ವರ್ಣಿಸಿದ್ದಾರೆ. ತಮ್ಮೂರಿನ ಜಾಲಿ ಗಿಡ, ಬೆಟ್ಟ ಗುಡ್ಡ, ಕಾಗೆ, ಕೆರೆ, ಕುಂಟಿ, ಹಳ್ಳ, ಕೊಳ್ಳ, ಗುಬ್ಬಚ್ಚಿ,




ಬೇವು ಹೊಂಗೆ ಮರಗಳು ಮುಂತಾದ ಸೃಷ್ಟಿಯ ಸೊಬಗು ತಮ್ಮನ್ನು ಅದ್ಹೇಗೆ ರೂಪಿಸಿತು ಎಂಬುದರ ವಿವರಣೆ ಪುಸ್ತಕದಲ್ಲಿ ಚೆನ್ನಾಗಿ ಮೂಡಿ ಬಂದಿದೆ. ಇವನೇನು ಓದ್ಯಾನು? ಎಂಬ ಜನರ ನಡುವೆ ತನಗೂ ಓದಲು ಬರುತ್ತದೆ, ಅಷ್ಟೇ ಅಲ್ಲದ ಉತ್ತಮ ಅಂಕ ಗಳಿಸಲೂ ಬರುತ್ತದೆ ಎಂಬುದನ್ನು ಸಾಧಿಸಿ ತೋರಿಸಿದ್ದಾರೆ. ಇದಕ್ಕೆ ಇಂಬು ಕೊಡುವಂತೆ ತಮ್ಮ ಬಗಲಲ್ಲಿ ಪುಸ್ತಕವೊಂದನ್ನು ಇರಿಸಿಕೊಂಡು ಗ್ರಾಮದ ಬೀದಿಗಳಲ್ಲಿ ಮೆರವಣಿಗೆ ಹೊರಟಿದ್ದನ್ನೂ ಅಚ್ಚುಕಟ್ಟಾಗಿ ನಿರೂಪಿಸಿದ್ದಾರೆ.

ತಮ್ಮ ಉಪನ್ಯಾಸಕ ಹುದ್ದೆಯನ್ನು ಉಳಿಸಿಕೊಳ್ಳುವ ಕಾರ್ಯ ಆಗಿನ ದಿನಗಳಲ್ಲಿ ಎಷ್ಟು ಕಷ್ಟವಾಗಿತ್ತು ಎಂಬುದನ್ನು ಕಣ್ಣಿಗೆ ಕಟ್ಟಿದಂತೆ ವಿವರಿಸಿದ್ದಾರೆ. ಕಾಗೆಯ ಗುಣ ನಮ್ಮಲ್ಲಿಯೂ ಬರಲಿ, ಇದ್ದುದನ್ನು ಎಲ್ಲರೂ ಹಂಚಿ ತಿನ್ನೋಣ, ಕಾಗೆಗೆ ಇರುವ ಕಾರುಣ್ಯದ ಕಣ್ಣು ನಮಗೂ ಇರಲಿ ಎಂಬ ಆಶಯದೊಂದಿಗೆ ಈ ಕಥನವನ್ನು ಬರಗೂರು ಬರೆದಿದ್ದಾರೆ ಎಂದೆನಿಸುತ್ತದೆ. ಒಂದು ಕಡೆಯಲ್ಲಿ ಅವರು ಹೇಳುತ್ತಾರೆ–ಈ ಪುಸ್ತಕಕ್ಕೆ ಈ ಹೆಸರನ್ನೇ ಯಾಕೆ ಇಟ್ಟಿರಿ ಎಂಬುದು ನಿಮಗೆ ಪುಸ್ತಕ ಓದಿದ ನಂತರ ತಿಳಿಯುತ್ತದೆ ಎಂದಿದ್ದಾರೆ. ಓದಿದ ನಂತರ ಖಂಡಿತ ಈ ಪ್ರಶ್ನೆಗೆ ಉತ್ತರ ಸಿಗುತ್ತದೆ.

ತಮ್ಮ ಅವಧಿಯಲ್ಲಿ ಬರಗೂರು ರಾಮಚಂದ್ರಪ್ಪ ಹಲವಾರು ಹುದ್ದೆಗಳನ್ನು ಅಲಂಕರಿಸಿದ್ದಾರೆ. ಒಂದು ಹುದ್ದೆಯಲ್ಲಿದ್ದಾಗ ಮತ್ತೊಂದು ಹುದ್ದೆಯ ಪ್ರಭಾರಿ ಅವಕಾಶ ಬಂದರೂ ಅದನ್ನು ನಯವಾಗಿ ತಿರಸ್ಕರಿಸುತ್ತಾರೆ ಬರಗೂರು. ಹಲವಾರು ಮುಖ್ಯಮಂತ್ರಿಗಳೊಂದಿಗೆ, ಸಚಿವರುಗಳೊಂದಿಗೆ, ಶಾಸಕರೊಂದಿಗೆ, ಸಿನೆಮಾ ನಟರೊಂದಿಗೆ ಒಳ್ಳೆಯ ಬಾಂಧವ್ಯ ಹೊಂದಿದ್ದ ಡಾ. ಬರಗೂರು ಎಲ್ಲಿಯೂ ತಮ್ಮ ಎಲ್ಲೆಯನ್ನು ದಾಟ–ದಂತೆ ಎಚ್ಚರಿಕೆ ವಹಿಸಿದ್ದಾರೆ. ಚಿತ್ರ ರಂಗದಲ್ಲಿ ಅವರು ಅತ್ಯಂತ ಹೆಚ್ಚಾಗಿ ಹಚ್ಚಿಕೊಂಡಿದ್ದು ಡಾ. ರಾಜ್‌ಕುಮಾರ್ ಅವರನ್ನು.

ಚಲನಚಿತ್ರ ರಂಗದಲ್ಲಿಯೂ ಸಹ ತಮ್ಮ ಛಾಪನ್ನು ಮೂಡಿಸಲು ಯತ್ನಿಸಿದ ಬರಗೂರು ಅಲ್ಲಲ್ಲಿ ಯಶಸ್ಸನ್ನೂ ಕಂಡಿದ್ದಾರೆ. ತಮ್ಮ ಜೀವನದಲ್ಲಿ ಒಂದು ನಿರ್ದಿಷ್ಟ ಗುರಿಯನ್ನು ಮತ್ತು ನೀತಿಯನ್ನು ಇಟ್ಟುಕೊಂಡು ಬಂದಿರುವ ಬರಗೂರು ಅವರನ್ನು ಇನ್ನಷ್ಟು ಸಮರ್ಪಕವಾಗಿ ಅರ್ಥ ಮಾಡಿಕೊಳ್ಳಲು ನೀವೊಮ್ಮೆ 'ಕಾಗೆ ಕಾರುಣ್ಯದ ಕಣ್ಣು' ಆಯ್ದ ಅನುಭವಗಳ ಕಥನವನ್ನು ಓದಬೇಕು.

– ಅರುಣ ಬಿ.ಕುಲಕರ್ಣಿ.
ನರೇಗಲ್ಲ–ಕೋಡಿಕೊಪ್ಪ.

ಕಾಗೆ ಕಾರುಣ್ಯದ ಕಣ್ಣು.
ಲೇ: ಬರಗೂರು ರಾಮಚಂದ್ರಪ್ಪ.
ಪುಟಗಳು: 360.
ಬೆಲೆ: 395 ರೂ.
ಪ್ರಕಾಶಕರು: ಅಂಕಿತ ಪುಸ್ತಕ. ಗಾಂಧಿ ಬಜಾರ, ಬಸವನಗುಡಿ–ಬೆಂಗಳೂರು.

# ಭೀಕರ ಅಪಘಾತ : 13 ಮಂದಿ ಸಾವು

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಲಾರಿಗೆ ಹಿಂಬದಿಯಿಂದ ಟಿಟಿ ವಾಹನವೊಂದು ರಭಸವಾಗಿ ಡಿಕ್ಕಿ ಹೊಡೆದ ಪರಿಣಾಮ 13 ಜನರು ಮೃತಪಟ್ಟ ದಾರುಣ ಘಟನೆ ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲೂಕಿನ ಗುಂಡೆನಹಳ್ಳಿ ಕ್ರಾಸ್‌ನಲ್ಲಿ ಇಂದು (ಜೂನ್ 28) ಬೆಳಿಗ್ಗೆ ನಡೆದಿದೆ.

ಮೃತರು ಚಿಂಚೋಳ್ಳಿ ಮಾಯಮ್ಮನ ದರ್ಶನಕ್ಕೆಂದು ತೆರಳಿದ್ದರು. ಊರಿಗೆ ಮರಳುತ್ತಿದ್ದಾಗ ಬೆಳಗಿನ ಜಾವ



4 ಗಂಟೆಯ ಸುಮಾರಿಗೆ ಭೀಕರ ಅಪಘಾತ ಸಂಭವಿಸಿದೆ. ಮೃತರೆಲ್ಲರೂ ಶಿವಮೊಗ್ಗ ಜಿಲ್ಲೆ ಭದ್ರಾವತಿ ತಾಲೂಕಿನ ಹೊಳೆ ಹೊನ್ನೂರು ಬಳಿಯ ಎಮ್ಮಿಹಟ್ಟಿ ಗ್ರಾಮದವರು ಎಂದು ವರದಿಗಳು ಹೇಳಿವೆ.

ಅಪಘಾತದಲ್ಲಿ ನಾಲ್ವರು ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ತಿಳಿದು ಬಂದಿದೆ. ಘಟನಾ ಸ್ಥಳಕ್ಕೆ ದೌಡಾಯಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಅಪಘಾತಕ್ಕೀಡಾದ ವಾಹನದಲ್ಲಿದ್ದ ಮೃತ ದೇಹಗಳನ್ನು ಹೊರ ತೆಗೆದಿದ್ದಾರೆ. ಬ್ಯಾಡಗಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಪ್ರಸ್ತಾವನೆಗೂ ಮುನ್ನ ಸಂಸತ್ತಿನಲ್ಲಿ 'ನೀಟ್' ಬಗ್ಗೆ ಚರ್ಚಿಸಬೇಕು: ವಿಪಕ್ಷ ನಾಯಕ ರಾಹುಲ್ ಗಾಂಧಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ನೀಟ್ ಪರೀಕ್ಷೆಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಕುರಿತು ಸಂಸತ್ತಿನಲ್ಲಿ ಗೌರವಯುತ ಹಾಗೂ ಉತ್ತಮ ಚರ್ಚೆ ನಡೆಸುವಂತೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಒತ್ತಾಯಿಸಿದ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, "ಈ ಬಗ್ಗೆ ಪ್ರಸ್ತಾವನೆಗೂ ಮುನ್ನ ಚರ್ಚಿಸಬೇಕು" ಎಂದು ಹೇಳಿದರು.

"ಅಧ್ಯಕ್ಷರ ಭಾಷಣಕ್ಕೆ ಧನ್ಯವಾದಗಳು ಮತ್ತು ನೀಟ್ ವಿಷಯವು ದಿನದ ಪ್ರಮುಖ ವಿಷಯವಾಗಿದೆ. ವಿರೋಧ ಪಕ್ಷಗಳು ಎಲ್ಲಕ್ಕಿಂತ ಮೊದಲು ಅದನ್ನು ಚರ್ಚೆಗೆ ತೆಗೆದುಕೊಳ್ಳಬೇಕೆಂದು ಒಪ್ಪಿಕೊಂಡಿವೆ" ಎಂದು ರಾಹುಲ್ ಗಾಂಧಿ ಹೇಳಿದರು.

"ಯುವಕರು ಚಿಂತಿತರಾಗಿದ್ದಾರೆ ಮತ್ತು ಏನಾಗಲಿದೆ ಎಂದು ಅವರಿಗೆ ತಿಳಿದಿಲ್ಲ. ವಿದ್ಯಾರ್ಥಿಗಳ ಕಾಳಜಿಯನ್ನು ಎತ್ತುವಲ್ಲಿ ಕೇಂದ್ರ ಸರ್ಕಾರ ಮತ್ತು ಪ್ರತಿಪಕ್ಷಗಳು ಒಟ್ಟಾಗಿವೆ ಎಂಬ ಸಂದೇಶ, ಭರವಸೆ ಸಂಸತ್ತಿನಿಂದ ಯುವಜನರಿಗೆ ಹೋಗಬೇಕು" ಎಂದು ಅವರು ಹೇಳಿದರು.

"ಇದು ಯುವಜನತೆಗೆ ಸಂಬಂಧಿಸಿದ ಸಮಸ್ಯೆಯಾಗಿರುವುದರಿಂದ, ಯುವಜನತೆಗೆ ಸಂಬಂಧಿಸಿದ ವಿಷಯದ ಬಗ್ಗೆ ಉತ್ತಮ ಮತ್ತು ಗೌರವಯುತವಾದ ಚರ್ಚೆ ನಡೆಯಬೇಕು ಎಂದು ನಾನು ಪ್ರಧಾನ ಮಂತ್ರಿಯವರನ್ನು ವಿನಂತಿಸುತ್ತೇನೆ" ಎಂದು ಅವರು ಚರ್ಚೆಯಲ್ಲಿ ಪಾಲ್ಗೊಳ್ಳುವಂತೆ ಒತ್ತಾಯಿಸಿದರು.

ಗುರುವಾರ ನಡೆದ ತಮ್ಮ ಸಭೆಯಲ್ಲಿ, ಎಲ್ಲ ವಿರೋಧ ಪಕ್ಷದ ನಾಯಕರು ಸಂಸತ್ತಿನಲ್ಲಿ ನೀಟ್ ವಿಷಯದ ಬಗ್ಗೆ ಚರ್ಚೆಯಾಗಬೇಕು ಎಂದು ಸರ್ವಾನುಮತದಿಂದ ಭಾವಿಸಿದ್ದಾರೆ. ಇದು ಅವರ ಸಮಸ್ಯೆ ಎಂದು ನಾನು ದೇಶದ ವಿದ್ಯಾರ್ಥಿಗಳಿಗೆ ಹೇಳಲು ಬಯಸುತ್ತೇನೆ ಮತ್ತು ಇಂಡಿಯಾ ಬಣದಲ್ಲಿರುವ ನಾವೆಲ್ಲರೂ ನಿಮ್ಮ ಸಮಸ್ಯೆಯು ಅತ್ಯಂತ ಮುಖ್ಯವಾದುದು ಎಂದು ಭಾವಿಸುತ್ತೇವೆ. ಏಕೆಂದರೆ, ನೀವು ಭಾರತದ ಭವಿಷ್ಯ" ಎಂದು ಗಾಂಧಿ ಹೇಳಿದರು.

ಏನು ಸಮಸ್ಯೆ?

ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ (ಪದವಿಪೂರ್ವ) ಅಥವಾ ನೀಟ್–ಯುಜಿ ಅನ್ನು ಮೇ 5 ರಂದು ಎನ್‌ಟಿಎ ನಡೆಸಿತು, ಇದರಲ್ಲಿ ಸುಮಾರು 24 ಲಕ್ಷ ಅಭ್ಯರ್ಥಿಗಳು ಭಾಗವಹಿಸಿದ್ದರು. ಜೂನ್ 4 ರಂದು ಫಲಿತಾಂಶಗಳನ್ನು ಪ್ರಕಟಿಸಲಾಯಿತು. ಆದರೆ, ಅದರ ನಂತರ ಬಿಹಾರದಂತಹ ರಾಜ್ಯಗಳಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ, ಇತರ ಅಕ್ರಮಗಳ ಆರೋಪಗಳು ಕೇಳಿಬಂದವು. ಶಿಕ್ಷಣ ಸಚಿವಾಲಯವು ವಿಶ್ವವಿದ್ಯಾಲಯ ಅನುದಾನ ಆಯೋಗ–ರಾಷ್ಟ್ರೀಯ ಅರ್ಹತಾ ಪರೀಕ್ಷೆ (ಯುಜಿಸಿ–ನೆಟ್) ಮತ್ತು ನೀಟ್ (ಸ್ನಾತಕೋತ್ತರ) ಪರೀಕ್ಷೆಗಳ "ಸಮಗ್ರತೆಗೆ ಧಕ್ಕೆಯುಂಟಾಗಿರಬಹುದು" ಎಂಬುದು ಗೊತ್ತಾದ ನಂತರ ರದ್ದುಗೊಳಿಸಿತು.

# ದೆಹಲಿ ವಿಮಾನ ನಿಲ್ದಾಣದ ಮೇಲ್ಛಾವಣಿ ಕುಸಿತ; ಓರ್ವ ಸಾವು, 6 ಜನರಿಗೆ ಗಾಯ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರೀ ಮಳೆಯಿಂದಾಗಿ ದೆಹಲಿ ವಿಮಾನ ನಿಲ್ದಾಣದ ಟರ್ಮಿನಲ್ –1 (ಟಿ 1) ನ ಛಾವಣಿಯ ಒಂದು ಭಾಗವು ಕಾರುಗಳ ಮೇಲೆ ಕುಸಿದಿದ್ದು, ಕನಿಷ್ಠ ಒಬ್ಬರು ಸಾವನ್ನದ್ದಾರೆ ಮತ್ತು ಆರು ಮಂದಿ ಗಾಯಗೊಂಡಿದ್ದಾರೆ. ದೇಶೀಯ ವಿಮಾನ ಕಾರ್ಯಾಚರಣೆಗಳನ್ನು ಹೊಂದಿರುವ ಟರ್ಮಿನಲ್ 1 ರಿಂದ ಎಲ್ಲ ಸಂಚಾರವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ.

"ಇಂದು ಮುಂಜಾನೆ ಭಾರೀ ಮಳೆಯಿಂದಾಗಿ ದೆಹಲಿ ವಿಮಾನ ನಿಲ್ದಾಣದ ಟರ್ಮಿನಲ್ 1 ರ ಮೇಲಾವರಣ ಕುಸಿದಿದೆ. ಇದರ ಪರಿಣಾಮವಾಗಿ, ಟರ್ಮಿನಲ್ 1 ಗೆ ಮತ್ತು ಅಲ್ಲಿಂದ ಹೊರಡುವ ವಿಮಾನಗಳನ್ನು ಮುಂದಿನ ಸೂಚನೆ ತನಕ ಮುಚ್ಚಲಾಗಿದೆ. ಸುಗಮ ಕಾರ್ಯಾಚರಣೆಗೆ ಪರ್ಯಾಯ ವಿಮಾನಗಳ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ" ಎಂದು ಸಚಿವಾಲಯವು ಎಕ್ಸ್‌ನಲ್ಲಿನ ಪೋಸ್ಟ್ ಮಾಡಿದೆ.

ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಕಿಂಜರಾಪು ಅವರು ವಿಮಾನ ನಿಲ್ದಾಣಕ್ಕೆ ಭೇಟಿ ನೀಡಿ ಟರ್ಮಿನಲ್ 1 ಅನ್ನು ಪರಿಶೀಲಿಸಿದರು. ವಿಮಾನ ನಿಲ್ದಾಣವು ತಾತ್ಕಾಲಿಕವಾಗಿ ಟರ್ಮಿನಲ್ 2 ಮತ್ತು ಟರ್ಮಿನಲ್ 3 ಗೆ ಕಾರ್ಯಾಚರಣೆಯನ್ನು ಬದಲಾಯಿಸಲಿದೆ ಎಂದು ಹೇಳಿದರು.

ಇದನ್ನು "ಅತ್ಯಂತ ಗಂಭೀರ" ಘಟನೆ ಎಂದು ಹೇಳಿದ ಅವರು, ಹೊಸದಾಗಿ ಆಯ್ಕೆಯಾದ ಸಚಿವರು ವಿಮಾನ ನಿಲ್ದಾಣದ ರಚನೆಯ ಸಂಪೂರ್ಣ ಪರಿಶೀಲನೆ ನಡೆಸಲಾಗುವುದು ಎಂದು ಘೋಷಿಸಿದರು. ಘಟನೆಯ ತಾಂತ್ರಿಕ ಕಾರಣಗಳು ಮತ್ತು ಇತರ ಅಂಶಗಳು ತನಿಖೆಯ ನಂತರ ತಿಳಿಯುತ್ತದೆ ಎಂದು ಅವರು ಹೇಳಿ, ಸಂತ್ರಸ್ತರ ಕುಟುಂಬಕ್ಕೆ 20 ಲಕ್ಷ ಮತ್ತು ಗಾಯಗೊಂಡವರಿಗೆ 3 ಲಕ್ಷ ಪರಿಹಾರ ಘೋಷಿಸಿದರು.

ಟಿ1 ಇಂಡಿಗೋ ಮತ್ತು ಸ್ಪೈಸ್‌ಜೆಟ್‌ನಿಂದ ದೇಶೀಯ ವಿಮಾನ ಕಾರ್ಯಾಚರಣೆಗಳನ್ನು ಮಾತ್ರ ಹೊಂದಿದೆ. ವಿಮಾನ ನಿಲ್ದಾಣವು ಮೂರು ಟರ್ಮಿನಲ್‌ಗಳನ್ನು ಹೊಂದಿದೆ, ಟಿ1, ಟಿ2 ಮತ್ತು ಟಿ3, ಮತ್ತು ಪ್ರತಿದಿನ ಸುಮಾರು 1,400 ವಿಮಾನ ಚಲನೆಗಳನ್ನು ನಿರ್ವಹಿಸುತ್ತದೆ.

ವಿಶ್ವದ ಅತ್ಯಂತ ಜನನಿಬಿಡ ವಿಮಾನ ನಿಲ್ದಾಣಗಳಲ್ಲಿ ಒಂದಾದ ಇಂದಿರಾಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್‌ನ ಪಿಕ್–ಅಪ್ ಮತ್ತು ಡ್ರಾಪ್ ಪ್ರದೇಶದಲ್ಲಿ ನಿಲ್ಲಿಸಲಾಗಿದ್ದ ನಾಲ್ಕು ಕಾರುಗಳಿಗೆ ರೂಫ್ ಶೀಟ್ ಕುಸಿದು ಬಿದ್ದಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಘಟನೆಯು ದೆಹಲಿ ಅಗ್ನಿಶಾಮಕ ಸೇವೆಗಳಿಗೆ (ಡಿಎಫ್‌ಎಸ್) ಮುಂಜಾನೆ 5.30 ರ ಸುಮಾರಿಗೆ ವರದಿಯಾಗಿದೆ.

ರಕ್ಷಣಾ ಕಾರ್ಯಾಚರಣೆಯ ಸಮಯದಲ್ಲಿ, ಕಬ್ಬಿಣದ ಬೀಮ್ ಬಿದ್ದ ಕಾರಿನಿಂದ ವ್ಯಕ್ತಿಯನ್ನು ಹೊರತೆಗೆಯುತ್ತಿರುವುದು ಕಂಡುಬಂದಿದೆ.

ದೆಹಲಿ ವಿಮಾನ ನಿಲ್ದಾಣದಲ್ಲಿ ಛಾವಣಿ ಕುಸಿದಿದ್ದರಿಂದ ಇಂಡಿಗೋ, ಸ್ಪೈಸ್‌ಜೆಟ್ ವಿಮಾನಗಳ ಹಾರಾಟವನ್ನು ರದ್ದುಗೊಳಿಸಿದೆ. ದೆಹಲಿ ವಿಮಾನ ನಿಲ್ದಾಣದಲ್ಲಿ ಟರ್ಮಿನಲ್ 1 ರ ರಚನಾತ್ಮಕ ಹಾನಿಯಿಂದಾಗಿ ತನ್ನ ವಿಮಾನ ಕಾರ್ಯಾಚರಣೆಗಳ ಮೇಲೆ ಪರಿಣಾಮ ಬೀರಿದೆ ಎಂದು ಇಂಡಿಗೋ ಹೇಳಿದೆ.

# ಹೊಸ ಕ್ರಿಮಿನಲ್ ಕಾನೂನುಗಳಿಗೆ ತಡೆ ನೀಡುವಂತೆ ಕೋರಿ ಸುಪ್ರೀಂ ಕೋರ್ಟ್‌ಗೆ ಅರ್ಜಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಜುಲೈ 1, 2024 ರಿಂದ ಜಾರಿಗೆ ಬರಲಿರುವ ಹೊಸ ಕ್ರಿಮಿನಲ್ ಕಾನೂನುಗಳನ್ನು ತಡೆಹಿಡಿಯಲು ಮತ್ತು ವಿವಿಧ ದೋಷಗಳಿರುವ ಕಾರಣ ಅವುಗಳ ಕಾರ್ಯಸಾಧ್ಯತೆಯನ್ನು ನಿರ್ಣಯಿಸಲು ತಜ್ಞರ ಸಮಿತಿ ರಚಿಸುವಂತೆ ನಿರ್ದೇಶನ ನೀಡಲು ಕೋರಿ ಸುಪ್ರೀಂ ಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿದೆ.

ಹೊಸ ಕ್ರಿಮಿನಲ್ ಕಾನೂನುಗಳು ಹಿಂದಿನ ಕಾನೂನುಗಳಿಂತ ದೊಡ್ಡ ಬದಲಾವಣೆಗಳನ್ನು ತರುವುದಿಲ್ಲ. ಬದಲಾಗಿ, ಇದು ನಾಗರಿಕರಲ್ಲಿ ಗೊಂದಲವನ್ನು ಉಂಟು ಮಾಡುತ್ತದೆ. ಪೊಲೀಸರಿಗೆ ಹೆಚ್ಚಿನ ಅಧಿಕಾರ ನೀಡುತ್ತದೆ ಮತ್ತು ಜನರ ಮೂಲಭೂತ ಹಕ್ಕುಗಳನ್ನು ತಡೆ–ಯುತ್ತದೆ ಎಂದು ಅರ್ಜಿಯಲ್ಲಿ ಹೇಳಲಾಗಿದೆ.

ಭಾರತೀಯ ಕಾನೂನುಗಳನ್ನು ವಸಾಹತುಶಾಹಿಗೊಳಿಸುವುದು ಹೊಸ ಕ್ರಿಮಿನಲ್ ಕಾನೂನುಗಳ ಮುಖ್ಯ ಉದ್ದೇಶವಾಗಿದೆ. ಹಳೆಯ ಕಾನೂನುಗಳನ್ನೇ ಪುನಾರವರ್ತನೆ ಮಾಡಿ ಹೆಸರು



ಮಾತ್ರ ಬದಲಿಸಲಾಗಿದೆ. ಇದು ವಿವರಣೆಗಳಿಲ್ಲದೆ ಪೊಲೀಸರಿಗೆ ಹೆಚ್ಚುವರಿ ಅಧಿಕಾರವನ್ನು ನೀಡುತ್ತದೆ. ಭಯದಿಂದ ಜನರನ್ನು ಆಳಲು ಮತ್ತು ಮೂಲಭೂತ ಹಕ್ಕುಗಳನ್ನು ಕಸಿದುಕೊಳ್ಳಲು ಸಹಾಯ ಮಾಡುತ್ತದೆ ಎಂದು ವಿವರಿಸಲಾಗಿದೆ.

ಭಾರತೀಯ ನ್ಯಾಯ ಸಂಹಿತೆ–2023, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ–2023 ಮತ್ತು ಭಾರತೀಯ ಸಾಕ್ಷಿ ಅಧಿನಿಯ–2023 ಎಂದು ಹೆಸರಿಸಲಾದ ಮೂರು ಹೊಸ ತಿದ್ದುಪಡಿ ಕ್ರಿಮಿನಲ್ ಕಾನೂನುಗಳನ್ನು ಡಿಸೆಂಬರ್ 2023 ರಲ್ಲಿ ಸಂಸತ್ತು ಅಂಗೀಕರಿಸಿದೆ.

ಕಾನೂನುಗಳ ಶೀರ್ಷಿಕೆಯು ನಿಖರವಾಗಿಲ್ಲ. ಶಾಸನ ಮತ್ತು ಅದರ ಉದ್ದೇಶಗಳ ಬಗ್ಗೆ ಮಾತನಾಡುವುದಿಲ್ಲ ಎಂದು ಪ್ರತಿಪಾದಿಸಿದ್ದಾರೆ. ಹಲವಾರು ಸದಸ್ಯರನ್ನು ಅಮಾನತುಗೊಳಿಸಿ, ಅವರ ಅಭಿಪ್ರಾಯಗಳಿಗೆ ಮನ್ನಣೆ ನೀಡದೆ, ಯಾವುದೇ ಚರ್ಚೆಗೆ ಒಳಪಡಿಸದೆ ಸಂಸತ್ತಿನಲ್ಲಿ ತಿದ್ದುಪಡಿ ಮಸೂದೆಗಳನ್ನು ಅಂಗೀಕರಿಸಲಾಗಿದೆ. ಈ ಮೂಲಕ ಅಕ್ರಮವೆಸಗಲಾಗಿದೆ ಎಂದು ಅರ್ಜಿದಾರರು ಉಲ್ಲೇಖಿಸಿದ್ದಾರೆ.

ಹೊಸ ಕಾನೂನುಗಳು ವಕೀಲರ ಮೇಲೆ ಪ್ರಭಾವ ಬೀರುತ್ತದೆ. ಅವರಿಗೆ ಹಲವು ಸವಾಲುಗಳನ್ನು ಒಡ್ಡುತ್ತದೆ ಎಂದೂ ಅರ್ಜಿಯಲ್ಲಿ ಹೇಳಲಾಗಿದೆ.

ವಕೀಲರಾದ ಸಂಜೀವ್ ಮಲ್ಹೋತ್ರಾ ಮತ್ತು ಕುನ್ವರ್ ಸಿದ್ಧಾರ್ಥ ಅವರ ಮೂಲಕ ಅಂಜಲಿ ಪಟೇಲ್ ಮತ್ತು ಛಾಯಾ ಅವರು ಪಿಐಎಲ್ ಸಲ್ಲಿಸಿದ್ದಾರೆ. ಅರ್ಜಿಯು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ–2023 ರ ಅಂಶಗಳನ್ನು ಎತ್ತಿ ತೋರಿಸಿದೆ. ಸುರಕ್ಷಾ ಸಂಹಿತೆ 15 ದಿನಗಳವರೆಗೆ ಪೊಲೀಸ್ ಕಸ್ಟಡಿಗೆ ಅವಕಾಶ ನೀಡುತ್ತದೆ. ಪೊಲೀಸರು 15 ದಿನಗಳ ಕಸ್ಟಡಿಯನ್ನು ಮುಗಿಸದಿದ್ದರೆ, ಇಡೀ ಅವಧಿಗೆ ಜಾಮೀನು ನಿರಾಕರಣೆಗೆ ಕಾರಣವಾಗಬಹುದು ಎಂದು ಅರ್ಜಿಯಲ್ಲಿ ತಿಳಿಸಲಾಗಿದೆ.

ಸುರಕ್ಷಾ ಸಂಹಿತೆ ಬಂಧನದ ಸಮಯದಲ್ಲಿ ಕೈ ಕೋಳಗಳ ಬಳಕೆಗೆ ಅವಕಾಶ ನೀಡುತ್ತದೆ. ಕೈ ಕೋಳಗಳನ್ನು ಬಳಸುವ ಅಧಿಕಾರವು ಆರೋಪಿಯ ವೈಯಕ್ತಿಕ ಸ್ವಾತಂತ್ರ್ಯವನ್ನು ಉಲ್ಲಂಘಿಸಬಹುದು. ಕಸ್ಟಡಿಯಿಂದ ತಪ್ಪಿಸಿಕೊಂಡ ಅಭ್ಯಾಸ ಇರುವ ಅಥವಾ ಪುನರಾವರ್ತಿತ ಅಪರಾಧಿ ಮತ್ತು ಅತ್ಯಾಚಾರ, ಆಸಿಡ್ ದಾಳಿ, ಸಂಘಟಿತ ಅಪರಾಧ, ಆರ್ಥಿಕ ಅಪರಾಧಗಳು, ಸಾರ್ವಭೌಮತ್ವ, ಏಕತೆ ಹಾಗೂ ಭಾರತದ ಸಮಗ್ರತೆಗೆ ಅಪಾಯವನ್ನುಂಟುಮಾಡುವ ಕೃತ್ಯಗಳಂತಹ ಅಪರಾಧಗಳ ಆರೋಪಿಗಳನ್ನು ಬಂಧಿಸಲು ಮಾತ್ರ ಕೈ ಕೋಳವನ್ನು ಬಳಸಬಹುದು.

ಸುರಕ್ಷಾ ಸಂಹಿತೆ ಸುಪ್ರೀಂ ಕೋರ್ಟ್‌ನ ತೀರ್ಪುಗಳು ಮತ್ತು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಮಾರ್ಗಸೂಚಿಗಳನ್ನು ಉಲ್ಲಂಘಿಸುತ್ತದೆ" ಎಂದು ಅರ್ಜಿಯಲ್ಲಿ ವಿವರಿಸಲಾಗಿದೆ.

## ನೀಟ್ ವಿರುದ್ಧ ನಿರ್ಣಯ ಅಂಗೀಕರಿಸಿದ ತಮಿಳುನಾಡು ವಿಧಾನಸಭೆ;

# ಪ್ಲಸ್–2 ಅಂಕಗಳ ಆಧಾರದಲ್ಲಿ ಪ್ರವೇಶಕ್ಕೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ತಮಿಳನಾಡು

ನೀಟ್–ಯುಜಿ ಪರೀಕ್ಷೆಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಗದ್ದಲದ ನಡುವೆಯೇ ತಮಿಳುನಾಡು ವಿಧಾನಸಭೆ ಶುಕ್ರವಾರ ದೃಢ ನಿಲುವು ತಳೆದಿದ್ದು, ರಾಜ್ಯಕ್ಕೆ ತನ್ನ (ಕೇಂದ್ರದ) ವಿದ್ಯಾರ್ಥಿಗಳನ್ನು ವೈದ್ಯಕೀಯ ಕಾಲೇಜಿಗೆ ಸೇರಿಸುವುದರಿಂದ ವಿನಾಯಿತಿ ನೀಡುವಂತೆ ಕೇಂದ್ರವನ್ನು ಒತ್ತಾಯಿಸುವ ನಿರ್ಣಯವನ್ನು ಅಂಗೀಕರಿಸುವುದಾಗಿ ಶುಕ್ರವಾರ ಪ್ರಕಟಿಸಿದೆ. ರಾಷ್ಟ್ರೀಯ ಅರ್ಹತೆ–ಪ್ರವೇಶ ಪರೀಕ್ಷೆ ಮತ್ತು ಪ್ಲಸ್ ಟು ಪರೀಕ್ಷೆಯ ಅಂಕಗಳ ಆಧಾರದ ಮೇಲೆ ಪ್ರವೇಶ ಪಡೆದುಕೊಳ್ಳಲು ವಿದ್ಯಾರ್ಥಿಗಳಿಗೆ ಅವಕಾಶ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ನೇತೃತ್ವದ ಡಿಎಂಕೆ ಸರ್ಕಾರ ನಿರ್ಣಯ ಮಂಡಿಸಿದ್ದು , ಪ್ಲಸ್ ಟು ಅಂಕಗಳನ್ನು ಅರ್ಹತಾ ಮಾನದಂಡವಾಗಿ ವೈದ್ಯಕೀಯ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳನ್ನು ಸೇರಿಸಿಕೊಳ್ಳಲು ತಮಿಳುನಾಡಿಗೆ ಅವಕಾಶ ನೀಡಬೇಕೆಂದು ಕೇಂದ್ರವನ್ನು ಒತ್ತಾಯಿಸುತ್ತಲೇ ನೀಟ್ ಅನ್ನು ರದ್ದುಗೊಳಿಸುವಂತೆ ಆಗ್ರಹಿಸಿದೆ.

# 'ಕಳಪೆ ಮೂಲಸೌಕರ್ಯಕ್ಕೆ ಕ್ರಿಮಿನಲ್ ನಿರ್ಲಕ್ಷ್ಯ ಕಾರಣ : ಖರ್ಗೆ ಕಿಡಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿ ವಿಮಾನ ನಿಲ್ದಾಣದ ಮೇಲ್ಛಾವಣಿ ಕುಸಿತದ ಬಗ್ಗೆ ಶುಕ್ರವಾರ ಮೋದಿ ಸರ್ಕಾರದ ವಿರುದ್ಧ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ ನಡೆಸಿದ್ದು, ಕಳೆದ 10 ವರ್ಷಗಳಲ್ಲಿ ನಡೆಸಿರುವ ಕಳಪೆ ಮೂಲಸೌಕರ್ಯಕ್ಕೆ "ಭ್ರಷ್ಟಾಚಾರ" ಮತ್ತು "ಅಪರಾಧ ನಿರ್ಲಕ್ಷ್ಯ" ಕಾರಣವಾಗಿದೆ ಎಂದು ಆಕ್ರೋಶ ಹೊರಹಾಕಿದ್ದಾರೆ.

ಭಾರೀ ಮಳೆಯ ನಡುವೆ ಶುಕ್ರವಾರ ಮುಂಜಾನೆ ದೆಹಲಿ ವಿಮಾನ ನಿಲ್ದಾಣದ ಟರ್ಮಿನಲ್–1 ರ ಮೇಲ್ಛಾವಣಿಯು ಟ್ಯಾಕ್ಸಿಗಳು



ಸೇರಿದಂತೆ ಕಾರುಗಳ ಮೇಲೆ ಕುಸಿದಿದೆ, ಇದು ವಿಮಾನ ನಿರ್ಗಮನವನ್ನು ಸ್ಥಗಿತಗೊಳಿಸಿತು. ನಾಗರಿಕ ವಿಮಾನಯಾನ ಸಚಿವ ಕೆ ರಾಮಮೋಹನ್ ನಾಯ್ಡು ಅವರು ಪರಿಸ್ಥಿತಿಯನ್ನು ಗಮನಿಸುತ್ತಿದ್ದಾರೆ ಮತ್ತು ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಹೇಳಿದರು.

ಪ್ರಕರಣದ ಕುರಿತು ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿರುವ ಖರ್ಗೆ, "ಕಳೆದ 10 ವರ್ಷಗಳ ಮೋದಿ ಸರ್ಕಾರದ ಕಳಪೆ ಮೂಲಸೌಕರ್ಯ ಕುಸಿತಕ್ಕೆ ಭ್ರಷ್ಟಾಚಾರ ಮತ್ತು ಕ್ರಿಮಿನಲ್ ನಿರ್ಲಕ್ಷ್ಯ ಕಾರಣವಾಗಿದೆ" ಎಂದು ಎಕ್ಸ್‌ನಲ್ಲಿನ ಪೋಸ್ಟ್ ಮಾಡಿದ್ದಾರೆ.

ದೆಹಲಿ ವಿಮಾನ ನಿಲ್ದಾಣ (ಟಿ1) ಮೇಲ್ಛಾವಣಿ ಕುಸಿತ, ಜಬಲ್‌ಪುರ ವಿಮಾನ ನಿಲ್ದಾಣದ ಛಾವಣಿ ಕುಸಿತ, ಅಯೋಧ್ಯೆಯ ಹೊಸ ರಸ್ತೆಗಳ ಹೀನಾಯ ಸ್ಥಿತಿ, ರಾಮಮಂದಿರ ಸೋರಿಕೆ, ಮುಂಬೈ ಟ್ರಾನ್ಸ್ ಹಾರ್ಬರ್ ಲಿಂಕ್ ರಸ್ತೆ ಬಿರುಕುಗಳು , 2023 ಮತ್ತು 2024 ರಲ್ಲಿ ಬಿಹಾರದಲ್ಲಿ ಬೀಳುವ 13 ಹೊಸ ಸೇತುವೆಗಳು, ಪ್ರಗತಿ ಮೈದಾನದ ಸುರಂಗ ಮುಳುಗುವಿಕೆ, ಗುಜರಾತ್‌ನಲ್ಲಿ ಮೋರ್ಬಿ ಸೇತುವೆ ಕುಸಿತ ದುರಂತ, ಇವು ಮೋದಿ ಜಿ ಮತ್ತು ಬಿಜೆಪಿಯ 'ಸೃಷ್ಟಿ ಮಾಡುವ ದೊಡ್ಡ ಹಕ್ಕುಗಳನ್ನು ಬಹಿರಂಗಪಡಿಸುವ ಕೆಲವು ಕಟು ನಿದರ್ಶನಗಳು" ಎಂದು ಖರ್ಗೆ ಇತ್ತೀಚಿನ ಕೇಂದ್ರ ಸರ್ಕಾರದ ಕಳಪೆ ಕಾಮಗಾರಿಗಳನ್ನು ಪಟ್ಟಿ ಮಾಡಿದ್ದಾರೆ.

### ಶಿವಾನುಭವ ಕಾರ್ಯಕ್ರಮದಲ್ಲಿ ಶ್ರೀ ಶಾಂತಲಿಂಗ ಮಹಾಸ್ವಾಮಿಗಳು

# ಚಲವಾದಿ ಗೌರಮ್ಮನವರ ಕೊಡುಗೆ ಅನನ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಗೌರಮ್ಮ ಚಲವಾದಿಯವರು ಜನಪದ ಕೋಗಿಲೆ ಎಂದು ಜನಮನದಲ್ಲಿ ಪ್ರಸಿದ್ಧರಾದವರು. ಜನಪದ ಸಾಹಿತ್ಯವನ್ನು ಉಳಿಸಿ ಬೆಳೆಸುವಲ್ಲಿ ಗೌರಮ್ಮ ಚಲವಾದಿಯವರ ಕೊಡುಗೆ ಅನನ್ಯ ಮತ್ತು ಅನುಪಮವಾದುದು ಎಂದು ಭೈರನಹಟ್ಟಿ ದೊರೆಸ್ವಾಮಿ ವಿರಕ್ತಮಠದ ಪೂಜ್ಯ ಶ್ರೀ ಶಾಂತಲಿಂಗ ಮಹಾಸ್ವಾಮಿಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2699ನೇ ಶಿವಾನುಭವ ಕಾರ್ಯಕ್ರಮದ ಸಮ್ಮುಖ ವಹಿಸಿ ಮಾತನಾಡಿದ ಶ್ರೀಗಳು, ಚಲವಾದಿ ಗೌರಮ್ಮನಲ್ಲಿರುವ ಕಲೆ, ಸಾಹಿತ್ಯ ಜ್ಞಾನ ಅಪಾರವಾದುದು. ಬದುಕಿನುದ್ದಕ್ಕೂ ಜನಪದ ಸಂಗೀತವನ್ನು ಹಾಡುತ್ತ ಜನಮನವನ್ನು ರಂಜಿಸುತ್ತಾ ಬಂದಿದ್ದಾರೆ. ಚಲವಾದಿ ಗೌರಮ್ಮನಲ್ಲಿರುವ ಜನಪದ ಕಲೆಯನ್ನು ಗುರುತಿಸಿ ಪ್ರೋತ್ಸಾಹಿಸಿ, ಪ್ರೇರಣೆ ನಿಡಿ ನಾಡಿಗೆ ಪರಿಚಯಿಸಿಕೊಟ್ಟವರು ನಮ್ಮ ಗುರುಗಳಾದ ಲಿಂ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಎಂದು ಸ್ಮರಿಸಿದರು.

ವೀರಣ್ಣ ಚನ್ನಪ್ಪ ಅಂಗಡಿ, ಅಡವಿಸೋಮಾಪೂರ ಜನಪದ ಸಂಗೀತ ಮತ್ತು ಶರಣಬಸಪ್ಪ ಹಳ್ಳಿ, ಸಿಂಧನೂರು ವಚನಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಕು. ಶ್ರೇಯಾ



ನಾಗರಾಜ ಮುನವಳ್ಳಿ, ವಚನ ಚಿಂತನೆಯನ್ನು ಕು. ತನುಷಾ ಚನ್ನಪ್ಪ ಮುನವಳ್ಳಿ ಇವರು ಮಾಡಿದರು. ಶಿವಾನುಭವದ ದಾಸೋಹ ಭಕ್ತಿ ಸೇವೆಯನ್ನು ವಹಿಸಿಕೊಂಡಿದ್ದ ಮಲ್ಲಿಕಾರ್ಜುನ ಚಲವಾದಿ ಹಾಗೂ ಚಂದ್ರಕಲಾ ಮುನವಳ್ಳಿ ಪರಿವಾರದವರನ್ನು ಪೂಜ್ಯರು ಸಂಮಾನಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸರ್ವರನ್ನು ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ. ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

'ಜಾನಪದ ಕೋಗಿಲೆ ಶರಣೆ ಗೌರಮ್ಮ ಚಲವಾದಿ:ಜೀವನ ಮತ್ತು ಸಾಧನೆ' ಕುರಿತು ಲಕ್ಷ್ಮಣ ಮೋಟೆ, ಅವರಾದಿ ಅವರು ಉಪನ್ಯಾಸ ನೀಡಿ, ಜನಪದ ಬಹುದೊಡ್ಡ ಸಾಗರ. ಈ ಸಾಗರದಲ್ಲಿ ಹಾಡು ಹಕ್ಕಿಯಾಗಿ, ಜನಪದದ ಕೋಗಿಲೆಯಾಗಿ ಮೆರೆದವರು ಚಲವಾದಿ ಗೌರಮ್ಮನವರು. ನಿರಕ್ಷರಿಯಾಗಿದ್ದ ಗೌರಮ್ಮನವರು ಸ್ವತಃ ಪದಗಳನ್ನು ಕಟ್ಟಿ, ಹಾಡುಗಳನ್ನು ಹಾಡಿ ಬಹು ಎತ್ತರಕ್ಕೆ ಬೆಳೆದಿದ್ದಾರೆ. ಜನಪದ ತತ್ವಪದಗಳನ್ನಷ್ಟೇ ಅಲ್ಲದೇ ಕಥೆಗಳನ್ನು ಕೂಡ ಹೇಳುತ್ತಿದ್ದರು ಎಂದು ಹೇಳಿದರು.



## ಇಂದು ಪ್ರತಿಬಂಧಕಾಜ್ಞೆ ಜಾರಿ

**■ವಿಜಯಸಾಕ್ಷಿ ಸುದ್ದಿ, ಗದಗ**

2024-25ನೇ ಸಾಲಿನ ವಿದ್ಯಾಲಯಗಳಿಗೆ 7, 8 ಮತ್ತು 9 ನೇ ತರಗತಿ ದಾಖಲಾತಿಗಾಗಿ ಪ್ರವೇಶ ಪರೀಕ್ಷೆಗಳು ಜೂನ್ 29 ರಂದು ಜರುಗಲಿವೆ.

ಸದರಿ ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಸಲುವಾಗಿ ಜಿಲ್ಲೆಯ 02 ಪರೀಕ್ಷಾ ಕೇಂದ್ರಗಳಾದ ಮುಂಡರಗಿ ತಾಲೂಕಿನ ಆದರ್ಶ ವಿದ್ಯಾಲಯ ಕೊರ್ಲಹಳ್ಳಿ, ಮತ್ತು ರೋಣ ತಾಲೂಕಿನ ಆದರ್ಶ ವಿದ್ಯಾಲಯ ಇಟಗಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಜೂನ್ 29 ರಂದು ಬೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಸೇರಿದಂತೆ ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ.

ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಹಾಗೂ ಹೊರ ಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಠಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ , ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ವೈಶಾಲಿ ಎಂ.ಎಲ್. ಅವರು ಆದೇಶಿಸಿದ್ದಾರೆ.

## ಜಿಲ್ಲಾ ಅಂಚೆ ಮುಖ್ಯಸ್ಥರಿಗೆ ಮನವಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಹೊಳೆ ಆಲೂರ ಪೋಸ್ಟ್ ಆಫೀಸ್ ಶಾಖೆಯಲ್ಲಿ ಎಟಿಎಂ, ಪೋಸ್ಟ್ ಆಫೀಸ್‌ನಲ್ಲಿ ಜನತೆಗೆ ದೊರಕುವ ಸೌಲಭ್ಯಗಳನ್ನು ಒದಗಿಸುವಂತೆ ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆ ಉತ್ತರ ಕರ್ನಾಟಕ ಅಧ್ಯಕ್ಷ ಎಂ.ಎ ಕುರ್ತಕೋಟಿ ಹಾಗೂ ರೋಣ ತಾಲೂಕು ಘಟಕದ ಅಧ್ಯಕ್ಷರಾದ ಎಮ್.ಎಚ್. ನದಾಫ್ ನೇತೃತ್ವದಲ್ಲಿ ಗದಗ ಜಿಲ್ಲಾ ಅಂಚೆ ಮುಖ್ಯಸ್ಥರಿಗೆ ಮನವಿ ಸಲ್ಲಿಸಿದರು.

ಎಮ್.ಎಚ್. ನದಾಫ್ ಮನವಿ ಸಲ್ಲಿಸಿ ಮಾತನಾಡಿ, ರೋಣದ ಹೊಳೆಆಲೂರ ಗ್ರಾಮದ ಪೋಸ್ಟ್ ಆಫೀಸಿನಲ್ಲಿ ಸರ್ಕಾರದ ಪಿಂಚಣಿ ಸೇರಿದಂತೆ ಇತರೆ ಹಣವನ್ನು ಪಡೆಯಲು ಒಂದೇ ಕೌಂಟರ್ ಇದ್ದು, ಅನಾನುಕೂಲವಾಗುತ್ತಿದೆ. ಹೀಗಾಗಿ, ಇನ್ನೊಂದು ಕೌಂಟರ್ ಪ್ರಾರಂಭಿಸಬೇಕು. ಗ್ರಾಮದ ಜನರ ಅನುಕೂಲಕ್ಕಾಗಿ ಒಂದು ಎಟಿಎಂ ಪ್ರಾರಂಭಿಸಬೇಕು ಎಂದು ವಿನಂತಿಸಿದರು.

ವಿನಂತಿಸಿಕೊಳ್ಳುತ್ತೇವೆ.

ಈ ಸಂದರ್ಭದಲ್ಲಿ ಬೆಟಗೇರಿ ಗ್ರಾಮ ಘಟಕದ ಅಧ್ಯಕ್ಷ ಪ್ರಕಾಶ್ ಗಾರವಾಡ, ಇಮ್ರಾನ್ ಕಲೆಗಾರ್, ಪ್ರವೀಣ್ ಚಾವಲಾ, ಕಾಸಿಂ ಚಪ್ಪರಬಂದ, ಪ್ರವೀಣ ಕರುಗಲ್ ಮುಂತಾದವರಿದ್ದರು.

## ಸಾರ್ವಜನಿಕರಿಗೆ ರೋಗ ಹರಡುವ ಭೀತಿ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ವಾರ್ಡ್ ನಂ 2ರಲ್ಲಿ ಚರಂಡಿ ಕಾಮಗಾರಿಯನ್ನು ಅರೆಬರೆ ಪೂರೈಸಿರುವುದರಿಂದ ಚರಂಡಿಯಲ್ಲಿ ಹೂಳು ತುಂಬಿ ಸ್ವಚ್ಛತೆ ಮರೀಚಿಕೆಯಾಗಿದೆ. ಇದರಿಂದ ಸಾಂಕ್ರಾಮಿಕ ರೋಗ ಹರಡುವ ಭೀತಿ ಸಾರ್ವಜನಿಕರನ್ನು ಕಾಡುತ್ತಿದೆ. ಚರಂಡಿ ನೀರು ಸರಾಗವಾಗಿ ಹರಿದು ಹೋಗಲು ಆಗದೇ ಕೊಳಚೆ ನಿಂತು ರೋಗ-ರುಜಿನುಗಳಿಗೆ ದಾರಿ ಮಾಡಿಕೊಟ್ಟಂತಾಗಿದ್ದು, ಸಾರ್ವಜನಿಕರು ನಿತ್ಯ ನರಕಯಾತನೆ ಅನುಭವಿಸುವಂತಾಗಿದೆ.



ಪ.ಪಂ ಅಧಿಕಾರಿಗಳು ಮನಸ್ಸಿಗೆ ಬಂದಾಗ ಚರಂಡಿಗೆ ಬ್ಲೀಚಿಂಗ್ ಪೌಡರ್ ಸಿಂಪಡಿಸಿ ಹೋದರೆ ಮತ್ತೆ ಇತ್ತ ಮುಖ ಹಾಕುವುದೇ ಇಲ್ಲ ಎಂಬ ಆರೋಪ ಸಾರ್ವಜನಿಕರಲ್ಲಿ ಕೇಳಿ ಬರುತ್ತಿದೆ.

ಮಳೆಗಾಲ ಬಂತೆಂದರೆ ಸಾಂಕ್ರಾಮಿಕ ರೋಗಗಳು ಹರಡುವುದು ಸಾಮಾನ್ಯವಾಗಿದ್ದು, ಪ.ಪಂ, ಆರೋಗ್ಯ ಇಲಾಖೆ ಸೊಳ್ಳೆಗಳ ನಿಯಂತ್ರಣಕ್ಕೆ ಫಾಗಿಂಗ್ ಮಾಡಿಸಬೇಕು ಮತ್ತು ಚರಂಡಿಯ ಸ್ವಚ್ಛತೆಗೆ ಮುಂದಾಗಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ಬಿಂಕದಕಟ್ಟಿ ಗ್ರಾ.ಪಂ ಅಧ್ಯಕ್ಷರ ಆಯ್ಕೆ




**■ವಿಜಯಸಾಕ್ಷಿ ಸುದ್ದಿ, ಗದಗ**

ಸಮೀಪದ ಬಿಂಕದಕಟ್ಟಿಯ ಗ್ರಾಮ ಪಂಚಾಯಿತಿ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯು ಶುಕ್ರವಾರ ನಡೆಯಿತು.

ಚುನಾವಣಾಧಿಕಾರಿಗಳಾಗಿ ಆಗಮಿಸಿದ ಮಲ್ಲಯ್ಯ ಸಿ.ಕೊರವನವರ ಸಮ್ಮುಖದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಿತು. ಅಧ್ಯಕ್ಷರಾಗಿ ತುಳಸಾ ಶ್ರೀನಿವಾಸಗೌಡ ತಿಮ್ಮನಗೌಡರ ಅವಿರೋಧವಾಗಿ ಆಯ್ಕೆಯಾದರು. ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಆರ್.ಎಮ್. ಮೂಲಿಮನಿ, ವಿ.ಡಿ ರಂಗಪ್ಪನವರ, ಡಿ.ಬಿ. ತಿರ್ಲಾಪುರ, ಹನುಮಂತಗೌಡ ಮೂಲಿಮನಿ, ಕೆ.ಎಚ್. ನಡುವಿನಮನಿ ಸೇರಿದಂತೆ ಗ್ರಾಮ ಪಂಚಾಯಿತಿಯ ಸರ್ವ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಕೆಂಪೇಗೌಡರ ಮುಂದಾಲೋಚನೆ ಹಿರಿದು



**■ವಿಜಯಸಾಕ್ಷಿ ಸುದ್ದಿ, ನರೇಗಲ್**

ಅಂದು ಬೆಂಗಳೂರಿನಲ್ಲಿ ನಿರ್ಮಾಣ ಮಾಡಿದ ಸ್ಥಾವರ, ಕೆರೆ, ಗುಡಿ, ಗೋಪುರಗಳು, ಪೇಟೆಗಳು, ಸಂಪರ್ಕ ರಸ್ತೆಗಳು ಬೆಂಗಳೂರನ್ನು ಇಂದಿಗೂ ಆದರ್ಶ ನಗರವನ್ನಾಗಿಸಿವೆ. ಕೆಂಪೇಗೌಡರ ಮುಂದಾಲೋಚನೆಯಿಂದ ಇದೆಲ್ಲ ಸಾಧ್ಯವಾಗಿದ್ದು, ಅವರ ಸಾಧನೆ ನಮಗೆಲ್ಲ ಸ್ಫೂರ್ತಿ ಎಂದು ವಿದ್ಯಾರ್ಥಿನಿ ಶಾಂಭವಿ ಹಿರೇವಡೆಯರ ನುಡಿದಳು.

ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಕಿಯರ ಪೌಢಶಾಲೆಯಲ್ಲಿ ಗುರುವಾರ ನಡೆದ ನಾಡಪ್ರಭು ಕೆಂಪೇಗೌಡರ ಜನ್ಮದಿನಾಚರಣೆ ನಿಮಿತ್ತ ವಿದ್ಯಾರ್ಥಿಗಳಿಗೆ ಏರ್ಪಡಿಸಲಾಗಿದ್ದ ಭಾಷಣ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಕೆಂಪೇಗೌಡರ ಸಮಗ್ರ ಜೀವನ ಚರಿತ್ರೆಯನ್ನು ಪ್ರಸ್ತುತ ಪಡಿಸಿದಳು. ವಿದ್ಯಾರ್ಥಿಗಳಿಗಾಗಿ ಚರ್ಚಾ ಸ್ಪರ್ಧೆ ಮತ್ತು ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು.

ಕೆಂಪೇಗೌಡರ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯ ಸಂಗಮೇಶ ಹೂಲಗೇರಿ ವಹಿಸಿದ್ದರು. ಶಿಕ್ಷಕ ಎಸ್.ಶಿವಮೂರ್ತಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಕೆ.ಸಿ. ಜೋಗಿ, ಎಸ್.ಎಫ್. ಧರ್ಮಾಯತ, ಆರ್.ಎಮ್. ಗುಳಬಾಳ ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ರೈಲ್ವೇ ನಿಲ್ದಾಣಕ್ಕೆ ನೇರ ಬಸ್ ಸೇವೆ ಆರಂಭ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಹೊಸ ಬಸ್ ನಿಲ್ದಾಣದಿಂದ ಧಾರವಾಡ ರೈಲ್ವೇ ನಿಲ್ದಾಣಕ್ಕೆ ಸಾರ್ವಜನಿಕರ ಬೇಡಿಕೆಯ ಮೇರೆಗೆ ಜೂನ್ 24ರಿಂದ ನೇರ ಬಸ್ ಸಂಚಾರ ಕಾರ್ಯಾಚರಣೆ ಪ್ರಾರಂಭಿಸಲಾಗಿದೆ. ಹುಬ್ಬಳ್ಳಿ-ಧಾರವಾಡ ನಗರ ಸಾರಿಗೆ ವಿಭಾಗದಿಂದ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಧಾರವಾಡ ಹೊಸ ಬಸ್ ನಿಲ್ದಾಣದಿಂದ ಧಾರವಾಡದ ರೈಲ್ವೇ ನಿಲ್ದಾಣಕ್ಕೆ ಸಂಚಾರ ಪ್ರಾರಂಭಿಸಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾಕರಸಾ ಸಂಸ್ಥೆಯ ಹುಬ್ಬಳ್ಳಿ ಧಾರವಾಡ ನಗರ ಸಾರಿಗೆ ವಿಭಾಗ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶ್ರೀ ಜ. ರೇಣುಕಾಚಾರ್ಯ ಜಯಂತ್ಯುತ್ಸವ ಸಮಾರೋಪ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ಉನ್ನತ ಗುರಿ ವ್ಯಕ್ತಿತ್ವ ವಿಕಾಸಕ್ಕೆ ದಾರಿದೀಪ

**■ವಿಜಯಸಾಕ್ಷಿ ಸುದ್ದಿ, ಚಿಂಚೋಳಿ**

ಭವಿಷ್ಯವನ್ನು ನಿರ್ಮಿಸುವ ಶಕ್ತಿ ಯುವ ಜನಾಂಗದಲ್ಲಿದೆ. ಉನ್ನತವಾದ ಗುರಿಯ ದಾರಿಯಲ್ಲಿ ನಡೆದರೆ ಜೀವನ ಉಜ್ವಲಗೊಳ್ಳಲು ಸಾಧ್ಯವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ನಗರದ ಹಾರಕೂಡ ಶ್ರೀ ಚನ್ನಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತ್ಯುತ್ಸವ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನ ಬುದ್ಧಿಶಕ್ತಿ ಬೆಳೆದಂತೆ ಭಾವನೆಗಳು ಬೆಳೆಯುತ್ತಿಲ್ಲ. ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಆದರ್ಶ ಚಿಂತನೆ ಮತ್ತು ನಿರಂತರ ಪ್ರಯತ್ನ ಬೇಕು. ಮಾನವೀಯ ಸಂಬಂಧಗಳು ಶಿಥಿಲಗೊಳ್ಳುತ್ತಿರುವ ಇಂದಿನ ದಿನಗಳಲ್ಲಿ ಸಂಸ್ಕಾರಯುಕ್ತ ಜೀವನಕ್ಕೆ ಹೆಚ್ಚಿನ ಮಹತ್ವ ಕೊಡಬೇಕಾಗಿದೆ. ಯುವ ಶಕ್ತಿ ದೇಶದ ಬಲು ದೊಡ್ಡ ಶಕ್ತಿ ಮತ್ತು ಆಸ್ತಿ. ಅವರಿಗೆ ಉತ್ತಮವಾದ ಸಂಸ್ಕಾರ ಕೊಡುವ ಅಗತ್ಯವಿದೆ.



ಶ್ರೀ ಜಗದ್ಗುರು ರೇಣುಕಾಚಾರ್ಯರು ಧರ್ಮದ ನೀತಿ ಸೂತ್ರಗಳನ್ನು ಬೋಧಿಸಿದ್ದಾರೆ.

ಹಿರಿಯರ ಮೌಲ್ಯಾಧಾರಿತ ಚಿಂತನಗಳು ಬಾಳಿನ ಆಶಾದೀಪ. ಸ್ವಾರ್ಥ ರಹಿತ ಬದುಕಿಗೆ ಬೆಲೆಯಿದೆ, ಬಲವಿದೆ. ದೇಶ-ಧರ್ಮ ಇವೆರಡೂ ಮನುಷ್ಯನ ಎರಡು ಕಣ್ಣಿದ್ದಂತೆ. ಇವೆರಡನ್ನು ಎಲ್ಲರೂ ಬೆಳೆಸಿ ಬಲಗೊಳಿಸುವ ಅಗತ್ಯವಿದೆ ಎಂದರು.

ಸಮ್ಮುಖ ವಹಿಸಿದ ಹಾರಕೂಡ ಹಿರೇಮಠದ ಡಾ.ಚನ್ನವೀರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ನಿರ್ಭೀತವಾಗಿ ಬದುಕುವುದೇ ನಿಜವಾದ ಬದುಕು. ಪ್ರಗತಿಪರವಾದ ಧ್ಯೇಯೋದ್ದೇಶಗಳು ಮಾನವನ ಶ್ರೇಯಸಿಗೆ ದಾರಿದೀಪ. ಶ್ರೀ ಗುರು ಅರಿವಿನ ಚೈತನ್ಯದ ಪ್ರತೀಕ. ಶ್ರೀ ಜಗದ್ಗುರು ರೇಣುಕಾಚಾರ್ಯರ ಜೀವನ ದರ್ಶನದ ಸಂದೇಶಗಳು ನಮ್ಮೆಲ್ಲರ ಬಾಳಿನ ಭಾಗ್ಯೋದಯಕ್ಕೆ ಆಶಾಕಿರಣವೆಂದರು.

ನಿಡಗುಂದಾ ಕರುಣೇಶ್ವರ ಶಿವಾಚಾರ್ಯರು, ಚಂದನಕೇರಾ ಅಭಿನವ ರಾಚೋಟೇಶ್ವರ ಶಿವಾಚಾರ್ಯರು ಹಾಗೂ ನರನಾಳ ಶಿವಕುಮಾರ ಶಿವಾಚಾರ್ಯರು ನುಡಿ ನಮನ ಸಲ್ಲಿಸಿದರು. ಅಧ್ಯಕ್ಷತೆ ವಹಿಸಿದ ಯುಗಮಾನೋತ್ಸವ ಸಮಿತಿ ಅಧ್ಯಕ್ಷ ಶರಣು ಪಾಟೀಲ ಮೋತಕಪಳ್ಳಿ ಮಾತನಾಡಿ, ಪ್ರತಿ ವರ್ಷವೂ ಜಯಂತ್ಯುತ್ಸವ ಆಚರಿಸಬೇಕೆಂಬ ಸತ್ಯ ಸಂಕಲ್ಪ ನಮ್ಮದಾಗಿದೆ. ಎಲ್ಲರ ಸಹಕಾರ ಸೇವೆ ಮನ ಮುಟ್ಟಿ ಮಾಡಿದರೆ ಯಶಸ್ಸು ನಿಶ್ಚಿತ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ, ಶ್ರೀರಕ್ಷೆ ನಮ್ಮೆಲ್ಲರ ಬಾಳಿಗೆ ಶಕ್ತಿ ತುಂಬಲೆಂದು ಬಯಸುತ್ತೇನೆ ಎಂದರು.

ಸಮಾರಂಭಕ್ಕೂ ಮುನ್ನ ಲೋಕ ಕಲ್ಯಾಣ-ವಿಶ್ವ ಶಾಂತಿಗಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಶುಭ ಹಾರೈಸಿದರು. 25 ಜನ ವೀರಮಾಹೇಶ್ವರ ಜಂಗಮ ವಟುಗಳಿಗೆ ವೀರಶೈವ ಧರ್ಮ ಪರಂಪರೆಯಂತೆ ಶಿವದೀಕ್ಷಾ ನೆರವೇರಿಸಲಾಯಿತು. ಹಾರಕೂಡ ಹಿರೇಮಠದಿಂದ ಅನ್ನ ದಾಸೋಹ ಜರುಗಿತು.

### ಸಾವಿರಾರು ಪ್ರತಿಭಾವಂತ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ ಗುರು

# ಪ್ರೊ. ಎಸ್.ಜಿ. ಕಡ್ಡಿ ಸೇವಾ ನಿವೃತ್ತಿ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ತಮ್ಮ ಸೇವೆಯ ಪ್ರಾರಂಭದಿಂದಲೂ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುವುದರ ಮೂಲಕ ಸಾವಿರಾರು ಪ್ರತಿಭಾವಂತ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನಲ್ಲಿ ಸೇವೆ ಸಲ್ಲಿಸಿದ ಪ್ರೊ.ಶರಬಸಪ್ಪ ಜಿ.ಕಡ್ಡಿ ಜೂನ್ 29ರಂದು ನಿವೃತ್ತಿ ಹೊಂದಲಿದ್ದಾರೆ.

ಕರ್ನಾಟಕ ಲೋಕಸೇವಾ ಆಯೋಗ ಆಹ್ವಾನಿಸಿದ್ದ ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರಾಗಿ 1996ರಲ್ಲಿ ಸಿದ್ದೇಶ್ವರ ಸ.ಪ್ರ.ದ ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ರಾಜ್ಯಶಾಸ್ತ್ರ ವಿಷಯದ ಸಹಾಯಕ ಪ್ರಾಧ್ಯಾಪಕರಾಗಿ ವೃತ್ತಿಯನ್ನು ಆರಂಭಿಸಿದರು. ನರಗುಂದದ ಸ.ಪ್ರ.ದ ಕಾಲೇಜಿನಲ್ಲಿ 9ವರ್ಷ, ರೋಣ ಸ.ಪ್ರ.ದ ಕಾಲೇಜಿನಲ್ಲಿ 1 ವರ್ಷ, ಮುಂಡರಗಿಯ ಸ.ಪ್ರ.ದ ಕಾಲೇಜಿನಲ್ಲಿ 11



ವರ್ಷ, ಗದಗ ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ 7 ವರ್ಷ ಸೇವೆ ಸಲ್ಲಿಸುವುದರ ಮೂಲಕ ಸಾವಿರಾರು ಬಡ ವಿದ್ಯಾರ್ಥಿಗಳಿಗೆ ದಾರಿದೀಪವಾಗಿ 28 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿದ್ದಾರೆ.

ವಿದ್ಯಾರ್ಥಿಗಳು ಸಮಸ್ಯೆಯಿಂದು ಬಂದಾಗ ಅವರ ಕಲಿಕಾ ಸಹಾಯಕ್ಕೆ ನಿಂತು ಅವರನ್ನು ಉನ್ನತ ಶಿಕ್ಷಣವಂತರನ್ನಾಗಿ ಮಾಡಿದ ಶ್ರೇಯಸ್ಸು ಇವರಿಗೆ ಸಲ್ಲುತ್ತದೆ. ರಾಜ್ಯಶಾಸ್ತ್ರದ ಬೋಧನಾ ಕೌಶಲ್ಯದ ಮೂಲಕ ಇವರು ಗ್ರಾಮೀಣ ಮಕ್ಕಳ ಆಶಾಕಿರಣವಾಗಿ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸಿ ಹಲವು ಉನ್ನತ ಹುದ್ದೆಗಳನ್ನು ಹೊಂದುವಂತೆ ಮಾಡಿದ್ದಾರೆ.

ರಾಜ್ಯಶಾಸ್ತ್ರದಲ್ಲಿ ಬರುವ ಸಂವಿಧಾನ, ರಾಷ್ಟ್ರ, ಅಂತಾರಾಷ್ಟ್ರೀಯ ರಾಜಕಾರಣ ಕುರಿತು ಶಿಕ್ಷಣ ನೀಡುವುದರೊಂದಿಗೆ ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಶ್ರಮಿಸಿದ ಫಲವಾಗಿ ಸಾವಿರಾರು ವಿದ್ಯಾರ್ಥಿಗಳು ಉನ್ನತ ಹುದ್ದೆಗಳನ್ನು ಹೊಂದುವಂತೆ ಮಾಡಿದ ಶ್ರೇಯಸ್ಸು ಇವರದಾಗಿದೆ. ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ವತಿಯಿಂದ ಪ್ರೊ.ಶರಬಸಪ್ಪ ಜಿ.ಕಡ್ಡಿ ಅವರಿಗೆ ಉಪನ್ಯಾಸಕರು, ವಿದ್ಯಾರ್ಥಿಗಳಿಂದ ಜೂ.29ರಂದು ಬೆಳಗ್ಗೆ 11.30ಕ್ಕೆ ಸನ್ಮಾನ ಕಾರ್ಯಕ್ರಮ ಜರುಗಲಿದೆ.

ವಿದ್ಯಾರ್ಥಿಗಳು ಭವಿಷ್ಯ ನಿರ್ಮಿಸುವ ನಾಯಕರಾಗಿದ್ದು, ಅವರ ಕುರಿತು ಪ್ರತಿಯೊಬ್ಬರೂ ಚಿಂತನೆ ಮಾಡುವುದರ ಮೂಲಕ ಅವರ ಭವಿಷ್ಯವನ್ನು ಕಟ್ಟಲು ಮುಂದಾಗಬೇಕು ಎನ್ನುತ್ತಾರೆ ಪ್ರೊ.ಶರಬಸಪ್ಪ ಕಡ್ಡಿ.

ವಿದ್ಯಾರ್ಥಿಗಳ ಉತ್ತಮ ಜೀವನ ಕಟ್ಟಲು ಗುರುಗಳು ಮುಖ್ಯ. ಹಾಗೆ ಆದರ್ಶವಾದದ ಮೂಲಕ ಪ್ರೊ. ಎಸ್.ಜಿ. ಕಡ್ಡಿಯವರು ನಿರಂತವಾಗಿ ಸಾವಿರಾರು ವಿದ್ಯಾರ್ಥಿಗಳಿಗೆ ಜ್ಞಾನದಾಸೋಹದ ಮೂಲಕ ಉತ್ತಮ ಭವಿಷ್ಯ ಕಟ್ಟಿದ ಶ್ರೇಯಸ್ಸು ಹೊಂದಿದ್ದಾರೆ.

**- ಎಂ.ಯು. ಹಿರೇಮಠ.**
**ಸ.ಪ್ರ.ದ ಮಹಿಳಾ ಕಾಲೇಜು ಪ್ರಾಚಾರ್ಯರು.**

# ಮೃತ್ಯುಂಜಯ ಅಪ್ಪನವರ ಸ್ಮರಣೋತ್ಸವ ಮಾಲಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ




ಮಣಕವಾಡದ ಮಹಿಮಾ ಪುರುಷ ಶ್ರೀಗುರು ಮೃತ್ಯುಂಜಯ ಮಹಾಸ್ವಾಮಿಗಳ ಸ್ಮರಣೋತ್ಸವ ಮಾಲಿಕೆ-129 ಸಮಾರಂಭ ಜೂನ್ 30ರಂದು ಮುಂಜಾನೆ 10.30ಕ್ಕೆ ನಗರದ ಲಖಾನೆ ಆಸ್ಪತ್ರೆಯ ಎದುರಿಗಿನ ಮೃತ್ಯುಂಜಯ ಗುರುಕುಲ ಆಶ್ರಮದ ಸಭಾ ಭವನದಲ್ಲಿ ಜರುಗಲಿದೆ. ಹಿರಿಯ ಸಾಹಿತಿಗಳು ಹಾಗೂ ಸೌಹಾರ್ದ ಮಹಾಮನೆ ವೇದಿಕೆಯ ಅಧ್ಯಕ್ಷರಾದ ಐ.ಕೆ. ಕಮ್ಮಾರ ಸಮಾರಂಭದ ಅಧ್ಯಕ್ಷತೆ ವಹಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರೇಮಾ ಬಸವರಾಜ ಪೂಜಾರ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಅಂದಿನ ಭಕ್ತಿ ಸೇವೆಯನ್ನು ಆಶ್ರಮದ ವತಿಯಿಂದ ಏರ್ಪಡಿಸಲಾಗಿದೆ. ಭಕ್ತರಾದ ನಾಗಾವಿಯ ಮೃತ್ಯುಂಜಯ ಹಟ್ಟಿ, ಕೆ.ಬಿ. ಮರಡ್ಡಿ ಗುರುಗಳು, ರಾಯಪ್ಪಜ್ಜ ನಾಗನೂರ, ಶಿವಣ್ಣ ಒಡೆಯರ, ಎಚ್.ಎನ್. ಕುರಿ, ಡಿ.ಜಿ. ಪಾಟೀಲ, ರಾಜೇಂದ್ರ ಕಲಬುರ್ಗಿ, ಶಿವಶಂಕರಪ್ಪ ಆರಟ್ಟಿ ಉಪಸ್ಥಿತರಿರುವರು.

ಈ ಪುಣ್ಯ ಕಾರ್ಯದಲ್ಲಿ ಪಾಲ್ಗೊಂಡು ಪೂಜ್ಯ ಮೃತ್ಯುಂಜಯ ಅಪ್ಪನ ಕೃಪೆಗೆ ಪಾತ್ರರಾಗಲು ಆಶ್ರಮದ ವಿದ್ಯಾರ್ಥಿಗಳಾದ ಆಲಮ್, ಅಸ್ಲಂ, ಅಕ್ರಂ, ಸ್ನೇಹಾ, ವಿಕಾಸ, ತರುಣ ಮುಂತಾದವರು ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

### ಅನುಷ್ಠಾನಾಧಿಕಾರಿಗಳಿಗೆ ಆಯೋಜಿಸಿದ್ದ ತರಬೇತಿ ಕಾರ್ಯಾಗಾರದಲ್ಲಿ ರಾಜಕುಮಾರ ಸಿ

# ಜನರ ಮನಸ್ಥಿತಿ ಬದಲಾಗಬೇಕು

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ದೇಶದಲ್ಲಿ ಕಠಿಣ ಕಾನೂನುಗಳು ಜಾರಿಯಲ್ಲಿದ್ದರೂ ಜನರು ಮಕ್ಕಳು, ಮಹಿಳೆ ವಿಷಯದಲ್ಲಿ ತಮ್ಮ ಮನಸ್ಥಿತಿ ಬದಲಾಯಿಸಿಕೊಳ್ಳುತ್ತಿಲ್ಲ. ಎಲ್ಲೆಡೆ ಮಕ್ಕಳು, ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ, ದೈಹಿಕ ಹಲ್ಲೆ, ಮಾನಸಿಕ ಕಿರುಕುಳ ದಿನದಿಂದ ದಿನಕ್ಕೆ ಹೆಚ್ಚುತ್ತಿವೆ. ಅವರ ಮೇಲಿನ ಶೋಷಣೆ ತಪ್ಪುತ್ತಿಲ್ಲ. ಇದಕ್ಕೆ ಪರಿಹಾರವೆಂದರೆ ಜನರ ಮನಸ್ಥಿತಿ ಬದಲಾಗಬೇಕು. ಪರಸ್ಪರ ಪ್ರೀತಿ, ವಿಶ್ವಾಸ, ಗೌರವ ಹೆಚ್ಚಿಸುವ ಕಾರ್ಯಚಟುವಟಿಕೆಗಳು ಎಲ್ಲೆಡೆ ಮೂಡಿಬರಬೇಕು ಎಂದು ಪ್ರಭಾರ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರಾಜಕುಮಾರ ಸಿ. ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಪೊಲೀಸ್ ಇಲಾಖೆ ಹಾಗೂ ಇತರ ಇಲಾಖೆಗಳ ಸಹಯೋಗದಲ್ಲಿ ಪೋಕ್ಸೊ ಕಾಯ್ದೆ-2012, ಬಾಲ್ಯ ವಿವಾಹ ನಿಷೇಧ ಕಾಯ್ದೆ-2006 ಹಾಗೂ ಕರ್ನಾಟಕ ರಾಜ್ಯ ತಿದ್ದುಪಡಿ ಕಾಯ್ದೆ-2019, ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆ ಕುರಿತು ಅನುಷ್ಠಾನಾಧಿಕಾರಿಗಳಿಗೆ ಆಯೋಜಿಸಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಪೋಕ್ಸೊ ವಿಶೇಷ ನ್ಯಾಯಾಲಯದಲ್ಲಿನ ಪ್ರಕರಣಗಳನ್ನು ನೋಡಿದಾಗ, ಈ ಅಮಾನವೀಯ ಘಟನೆಗಳು ಜರುಗಲು ಅವರಲ್ಲಿ ಕಾನೂನು ಅರಿವಿನ ಕೊರತೆ ಸಹ ಕಾಣುತ್ತದೆ. ಮಕ್ಕಳಲ್ಲಿ ಪೋಕ್ಸೊ ಮತ್ತು ಬಾಲ್ಯ ವಿವಾಹ ನಿಷೇಧ ಕಾನೂನುಗಳ ಬಗ್ಗೆ ತಿಳುವಳಿಕೆ ಮೂಡಿಸಬೇಕು. ಅಸಹನೀಯ ಘಟನೆಗಳು ನಡೆದಾಗ ಯಾರನ್ನು, ಹೇಗೆ, ಎಲ್ಲಿ ಸಂಪರ್ಕಿಸಬೇಕು ಎಂಬ ತಿಳುವಳಿಕೆ ಮಕ್ಕಳಿಗೆ ಇರಬೇಕು. ಈ ನಿಟ್ಟಿನಲ್ಲಿ ಎಲ್ಲ ಇಲಾಖೆಗಳು ಕಾರ್ಯಕ್ರಮ ರೂಪಿಸಿ, ಜಾರಿಗೊಳಿಸಬೇಕೆಂದು ಅವರು ಹೇಳಿದರು.

ತಾಲೂಕಾ ವೈದ್ಯಾಧಿಕಾರಿ ಡಾ. ಕೆ.ಎನ್. ತನುಜಾ ಮಾತನಾಡಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹಿರಿಯ ಸಿವಿಲ್ ನ್ಯಾಯಾಧೀಶ ಪರುಶರಾಮ ದೊಡ್ಡಮನಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಮಕ್ಕಳ ರಕ್ಷಣಾ ಘಟಕದ ಮಹಮ್ಮದ ಅಲಿ ತಹಸೀಲ್ದಾರ ಕಾರ್ಯಕ್ರಮ ನಿರೂಪಿಸಿದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನೀತಾ ವಾಡಕರ ವಂದಿಸಿದರು.

ವೇದಿಕೆಯಲ್ಲಿ ಸರ್ಕಾರಿ ಅಭಿಯೋಜಕಿ ಶೈಲಾ ಅಂಗಡಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ, ಎಸ್.ಎಂ. ಹುಡೆದಮನಿ, ಪದವಿಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಕೆ.ಪಿ. ಸುರೇಶ ಇದ್ದರು.

ಮಕ್ಕಳ ಜಾಗೃತಿಗಾಗಿ ಕಾರ್ಯಾಗಾರದಲ್ಲಿ ವಿವಿಧ ರೀತಿಯ ಪೋಸ್ಟರ್, ಸ್ಟಿಕರ್‌ಗಳನ್ನು ಅತಿಥಿಗಳು ಬಿಡುಗಡೆ ಮಾಡಿದರು. ಕಾರ್ಯಾಗಾರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ಅಧಿಕಾರಿಗಳು, ನ್ಯಾಯವಾದಿಗಳು, ಪ್ಯಾನಲ್ ವಕೀಲರು ಭಾಗವಹಿಸಿದ್ದರು.

**ವಿಶೇಷ ಉಪನ್ಯಾಸಗಳು**

ಕಾರ್ಯಾಗಾರದಲ್ಲಿ 2ನೇ ಅಧಿಕ ಮತ್ತು ಸತ್ರ ನ್ಯಾಯಾಲಯ ಹಾಗೂ ವಿಶೇಷ ಪೋಕ್ಸೊ ನ್ಯಾಯಾಲಯದ ಸರ್ಕಾರಿ ಅಭಿಯೋಜಕಿ ಶೈಲಾ ಅಂಗಡಿ ಅವರು ಪೋಕ್ಸೊ ಕಾಯ್ದೆ-2012, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಲೀಗಲ್ ಮತ್ತು ಪ್ರೊಬೆಷನ್ ಅಧಿಕಾರಿ ನೂರಜಹಾನ್ ಕಿಲ್ಲೇದಾರ ಅವರು ಬಾಲ್ಯ ವಿವಾಹ ನಿಷೇಧ ಕಾಯ್ದೆ-2006 ಹಾಗೂ ಕರ್ನಾಟಕ ರಾಜ್ಯ ತಿದ್ದುಪಡಿ ಕಾಯ್ದೆ-2019 ಕುರಿತು ಮತ್ತು ಸರ್ ಸಿದ್ದಪ್ಪ ಕಂಬಳಿ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲೆ ಡಾ. ಮಂಜುಳಾ ಎಸ್.ಆರ್ ಅವರು ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆ ಕುರಿತು ವಿಶೇಷ ಉಪನ್ಯಾಸ ನೀಡಿ, ತರಬೇತಿಯಲ್ಲಿನ ಅನುಷ್ಠಾನ ಅಧಿಕಾರಿಗಳೊಂದಿಗೆ ಸಂವಾದ ನಡೆಸಿದರು.

# 'ಹೃದಯಸ್ಪರ್ಶಿ' ಸನ್ಮಾನ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ಬೆಟಗೇರಿ ಹೊರವಲಯದ ನಾಗಸಮುದ್ರ ರಸ್ತೆಯಲ್ಲಿರುವ ಸರ್ಕಾರಿ ಪ್ರಥಮದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಪ್ರಾಚಾರ್ಯರಾಗಿರುವ ಡಾ. ಎಸ್.ಎಫ್. ಸಿದ್ನೇಕೊಪ್ಪ ಅವರು ಜೂ.30ರಂದು ನಿವೃತ್ತಿ ಹೊಂದಿರುವ ನಿಮಿತ್ತ ಜೂ.29ರ ಬೆಳಿಗ್ಗೆ 11.30ಕ್ಕೆ ಕಾಲೇಜು ಸಭಾಂಗಣದಲ್ಲಿ ಸನ್ಮಾನ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರೂ ಆಗಿರುವ ಎಚ್.ಕೆ. ಪಾಟೀಲ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ಧಾರವಾಡದ ಕಾಲೇಜು ಶಿಕ್ಷಣ ಇಲಾಖೆ ಪ್ರಾದೇಶಿಕ ಜಂಟಿ ನಿರ್ದೇಶಕ ಪ್ರೊ. ಪ್ರಕಾಶ ಹೊಸಮನಿ, ರಾಣೆಬೆನ್ನೂರಿನ ಬಿ.ಎ.ಜೆ.ಎಸ್.ಎಸ್. ಸಮೂಹ ಶಿಕ್ಷಣ ಸಂಸ್ಥೆಗಳ ಆಡಳಿತಾಧಿಕಾರಿ ಮತ್ತು ನವ ದೆಹಲಿಯ ರಾಷ್ಟ್ರೀಯ ಶೈಕ್ಷಣಿಕ ಸಲಹಾ ಮಂಡಳಿಯ ಸದಸ್ಯ ಡಾ. ಆರ್.ಎಂ. ಕುಬೇರಪ್ಪ, ಧಾರವಾಡದ ವಿಶ್ವಚೇತನ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಹಾಗೂ ಸಾಯಿ ಡೆವಲಪರ್ಸ್‌ನ ಮ್ಯಾನೇಜಿಂಗ್ ಡೈರೆಕ್ಟರ್ ಡಾ. ಸರ್ ಐ.ಎ. ಪಿಂಜಾರ ಅವರು ಆಗಮಿಸುವರು.

ಇದೇ ಸಂದರ್ಭದಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಯ ನೂತನ ಸದಸ್ಯರಿಗೆ ಸ್ವಾಗತ ಹಾಗೂ ಸನ್ಮಾನ ನಡೆಯಲಿದೆ. ಸ.ಪ್ರ.ದ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಬೋಧಕ/ ಬೋಧಕೇತರ ಸಿಬ್ಬಂದಿ ಉಪಸ್ಥಿತರಿರುವರು ಎಂದು ಕಾಲೇಜಿನ ಹಿರಿಯ ಉಪನ್ಯಾಸಕ ಖಲೀಲ್ ಅಹ್ಮದ್ ಚಿಕ್ಕೇರೂರ ಹಾಗೂ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನಂತಗೌಡ ಆರ್.ಕಲ್ಮನಿ ತಿಳಿಸಿದ್ದಾರೆ.

# ದೈಹಿಕ ಶಿಕ್ಷಕರ ಸಂಘದಿಂದ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ದೈಹಿಕ ಶಿಕ್ಷಕರ ಸಮಸ್ಯೆ ಬಗ್ಗೆ ಮನವರಿಕೆ ಮಾಡುವ ಮನವಿಯನ್ನು ಸಲ್ಲಿಸಲಾಯಿತು.

ದೈಹಿಕ ಶಿಕ್ಷಕರಿಗೂ ಸಾಮಾನ್ಯ ಶಿಕ್ಷಕರಿಗೂ ಇರುವ ವ್ಯತ್ಯಾಸವನ್ನು ಸರಿಪಡಿಸುವುದು ಮುಖ್ಯ ಗುರಿಯಾಗಿದೆ, ಬಡ್ತಿಯನ್ನು ಕೊಡುವುದು ಮತ್ತು ಖಾಲಿ ಇರುವ ದೈಹಿಕ ಶಿಕ್ಷಕರನ್ನು ತುಂಬುವುದು ಸೇರಿದಂತೆ ಕೆಲವು ಪ್ರಮುಖ ಬೇಡಿಕೆಯನ್ನು ಈಡೇರಿಸಲು ಉಪ ನಿರ್ದೇಶಕರಿಗೆ ಮನವಿಯನ್ನು ಸಲ್ಲಿಸಲಾಯಿತು. ಆದಷ್ಟು ಬೇಗ ಬೇಡಿಕೆಯನ್ನು ಈಡೇರಿಸದಿದ್ದರೆ ಪ್ರಸ್ತುತ ಸಾಲಿನಲ್ಲಿ ಕ್ರೀಡಾಕೂಟವನ್ನು ಬಹಿಷ್ಕರಿಸುವ ಮೂಲಕ ಅನಿರ್ದಿಷ್ಟ ಅವಧಿಯವರೆಗೆ ಸತ್ಯಾಗ್ರಹ ಕೈಗೊಳ್ಳಲಾಗುವುದು ಎಂದು ಸಂಘದ ಗದಗ ಜಿಲ್ಲಾ ಅಧ್ಯಕ್ಷ ರಾಜು ಬಿ .ಚವ್ಹಾಣ ಹೇಳಿದರು.

ಈ ಸಂದರ್ಭದಲ್ಲಿ ಗೌರವ ಅಧ್ಯಕ್ಷ ವಾಸು ಕಲಕಾಂಬಿ, ಕಾರ್ಯದರ್ಶಿ ವಿ.ಟಿ. ಅಂಗಡಿ, ಖಜಾಂಚಿ ವಾಸು ಲಮಾಣಿ, ರಾಜ್ಯ ಸದಸ್ಯರಾದ ಕಿರಣ ಮುಂಡರಗಿ, ವೀರೇಶ್ ಕುಮಾರ್, ಕಾವೇರಿ ಚೂರಿ ಹಾಗೂ ಸಂಘದ ಎಲ್ಲಾ ಪದಾಧಿಕಾರಿಗಳು ಇದ್ದರು.

# ವಸತಿ ನಿಲಯಗಳಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

2024-25ನೇ ಸಾಲಿಗೆ ಶಿರಹಟ್ಟಿ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಶಿರಹಟ್ಟಿ, ಮಾಗಡಿ, ಲಕ್ಷ್ಮೇಶ್ವರ ಮತ್ತು ಬೆಳ್ಳಟ್ಟಿಯಲ್ಲಿಯ ಸರಕಾರಿ ಡಿ.ದೇವರಾಜು ಅರಸು ಮೆಟ್ರಿಕ್ ಪೂರ್ವ ಬಾಲಕ/ಬಾಲಕಿಯರ ವಸತಿ ನಿಲಯಗಳಲ್ಲಿ ಖಾಲಿ ಇರುವ ಸ್ಥಳಗಳಿಗೆ ಅರ್ಜಿಗಳನ್ನು ಕರೆಯಲಾಗಿದೆ.

6ರಿಂದ 10ನೇ ತರಗತಿಯ ಆಸಕ್ತ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಜೂ.27 ರಿಂದ ಜು.10ರ ಒಳಗಾಗಿ ಸಲ್ಲಿಸಬೇಕು. ಅರ್ಜಿಯ ಜೊತೆಗೆ ಅಗತ್ಯ ದಾಖಲೆ ಸಲ್ಲಿಸಬೇಕು. ಸಲ್ಲಿಸಿದ ಅರ್ಜಿಯ ಜೊತೆ ಎಲ್ಲ ಝರಾಕ್ಸ ದಾಖಲಾತಿಗಳನ್ನು ತಾಲೂಕು ಕಚೇರಿಗೆ ಸಲ್ಲಿಸಬೇಕು. ಅಪೂರ್ಣ ಹಾಗೂ ಅವಧಿ ಮೀರಿ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಎಂದು ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಮರಿಗೌಡ ಸುರಕೋಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ 2024-25 ನೇ ಸಾಲಿಗೆ ಆನ್ ಲೈನ್ ಮೂಲಕ https://shp.karnataka.gov.in/bcwd ಅರ್ಜಿ ಸಲ್ಲಿಸಲು ಜುಲೈ 10 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004 ಮತ್ತು 8050770005 ಸಂಪರ್ಕಿಸಬಹುದಾಗಿದೆ.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ


ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರ (ಪಿ.ಯು.ಸಿ ಮತ್ತು ಪಿಯುಸಿ ಸಮಾನಂತರ ಕೋರ್ಸಿನ ) ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಆನ್‌ಲೈನ್ ಮೂಲಕ https://shp.karnataka.gov.in/bcwd ಅರ್ಜಿ ಸಲ್ಲಿಸಲು ಜುಲೈ 20 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004 ಮತ್ತು 8050770005 ಸಂಪರ್ಕಿಸಬಹುದಾಗಿದೆ.

### ಪ್ರಾಮಾಣಿಕ ಸೇವೆ ಸಲ್ಲಿಸಿದ ಡಾ. ಶಾಬುದ್ದಿನ ಎಫ್.ಸಿದ್ನೆಕೊಪ್ಪರ ಸೇವಾ ನಿವೃತ್ತಿ

# ಬಡ ವಿದ್ಯಾರ್ಥಿಗಳ ದಾರಿದೀಪ

■ ವಿಜಯಸಾಕ್ಷಿ ಸುದ್ದಿ, ಗದಗ




ಸದಾ ತಮ್ಮ ಪ್ರಾಮಾಣಿಕ ಸೇವೆಯ ಮೂಲಕ ಸಾವಿರಾರು ಪ್ರತಿಭಾವಂತ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರದ ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿದ ಡಾ. ಶಾಬುದ್ದಿನ ಎಫ್.ಸಿದ್ನೇಕೊಪ್ಪ ಜೂನ್.29ರಂದು ನಿವೃತ್ತಿ ಹೊಂದಲಿದ್ದಾರೆ. ಇವರಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರದಿಂದ ಜುಲೈ 1ರಂದು ಸನ್ಮಾನ ಜರುಗಲಿದೆ.

ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರಾಗಿ 1996 ಜೂನ್ 24ರಂದು ಧಾರವಾಡ ಜಿಲ್ಲೆಯ ಅಳ್ನಾವರ ಸ.ಪ್ರ.ದ ಕಾಲೇಜಿನಲ್ಲಿ ವಾಣಿಜ್ಯಶಾಸ್ತ್ರ ವಿಷಯದ ಸಹಾಯಕ ಪ್ರಾಧ್ಯಾಪಕರಾಗಿ ವೃತ್ತಿಯನ್ನು ಆರಂಭಿಸಿದ ಇವರು, 2005ರಲ್ಲಿ ಕ.ವಿ.ವಿ.ಯ ಡಾ. ಎಸ್.ಜಿ. ಹುಂಡೇಕರ್ ಮತ್ತು ಹೂಗಾರ ಅವರ ಮಾರ್ಗದರ್ಶನದಲ್ಲಿ ಪಿ.ಎಚ್.ಡಿ ಪದವಿಯನ್ನು ಪಡೆದರು.

> ವಿದ್ಯಾರ್ಥಿಗಳ ಭವಿಷ್ಯ ಕಟ್ಟಲು ತಮ್ಮನ್ನು ನಿರಂತರವಾಗಿ ತೊಡಗಿಸಿಕೊಳ್ಳುವುದರ ಮೂಲಕ ವಿದ್ಯಾರ್ಥಿಗಳ ಪ್ರೀತಿಯ ಪ್ರಾಧ್ಯಾಪಕರಾಗಿ, ಪ್ರಾಚಾರ್ಯರಾಗಿ ನಿವೃತ್ತಿ ಅಂಚಿನವರೆಗೂ ಅನುಪಮ ಸೇವೆ ಸಲ್ಲಿಸಿದ ಪ್ರೊ. ಸಿದ್ನೇಕೊಪ್ಪ ಅವರ ಸೇವೆ ಸ್ಮರಣೀಯ.
>
> **- ಎಸ್.ವಿ. ಸಂಕನೂರ.**
> **ವಿಧಾನ ಪರಿಷತ್ ಸದಸ್ಯರು.**

2007ರಲ್ಲಿ ಮುಳಗುಂದದ ಸ.ಪ್ರ.ದ ಕಾಲೇಜಿನ ಪ್ರಾಚಾರ್ಯರಾಗಿ, ನಂತರ 2011ರಲ್ಲಿ ಗದಗ ನಗರದ ಸ.ಪ್ರ.ದ ಕಾಲೇಜು ಪ್ರಾಚಾರ್ಯರಾಗಿ ನೂತನ ಕಟ್ಟಡಕ್ಕಾಗಿ ಶ್ರಮಿಸಿದ್ದಲ್ಲದೆ ಕಾಲೇಜಿನಲ್ಲಿ ಸ್ನಾತಕೋತ್ತರ ಅಧ್ಯಯನ ಕೇಂದ್ರವನ್ನು ಪ್ರಾರಂಭಿಸಿ ಬಡ ವಿದ್ಯಾರ್ಥಿಗಳಿಗೆ ದಾರಿದೀಪವಾಗಿ 30 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿದ್ದಾರೆ.

ಯಾವುದೇ ಖಾಸಗಿ ಕಾಲೇಜಿಗೆ ಕಡಿಮೆ ಇಲ್ಲದಂತೆ ಪದವಿ ವಿದ್ಯಾರ್ಥಿಗಳ ಹಿತಕ್ಕಾಗಿ ಉತ್ತಮ ಕಲಿಕಾ ವಾತಾವರಣ, ಗುಣಮಟ್ಟದ ಗ್ರಂಥಾಲಯ, ವಿಜ್ಞಾನ ಪ್ರಯೋಗಾಲಯ, ಮಲ್ಟಿ ಜಿಮ್, ಉತ್ತಮ ಭೋದನೆ, ಸಿಬ್ಬಂದಿ ವರ್ಗದ ಕಾರ್ಯಕ್ಷಮತೆಗೆ ಯುಜಿಸಿ ನ್ಯಾಕ್ ಪೀರ್ ಸಮಿತಿ ಬಿ+ ಮಾನ್ಯತೆ ಪಡೆಯುವಂತೆ ಮಾಡಿದ ಶ್ರೇಯಸ್ಸು ಇವರದಾಗಿದೆ.

ಜೂ.1ರಂದು ಸ.ಪ್ರ.ದರ್ಜೆ ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ನಿವೃತ್ತಿಗೊಳ್ಳುತ್ತಿರುವ ಪ್ರಾಚಾರ್ಯ ಡಾ. ಎಸ್.ಎಫ್. ಸಿದ್ನೇಕೊಪ್ಪ ಅವರಿಗೆ ಬೆಳಿಗ್ಗೆ 11.30ಕ್ಕೆ ಸನ್ಮಾನ ಕಾರ್ಯಕ್ರಮದಲ್ಲಿ ಕಾನೂನು ಸಂಸದೀಯ, ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ್, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಡಾ. ಆರ್.ಎಮ್. ಕುಬೇರಪ್ಪ, ಡಾ. ಐ.ಎ. ಪಿಂಚಾರ, ನೂತನ ಕಾಲೇಜಿನ ಅಭಿವೃದ್ಧಿ ಸಮಿತಿ ಸದಸ್ಯರು ಪಾಲ್ಗೊಳ್ಳಲಿದ್ದಾರೆ.

ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ದೇಶದ ಆಸ್ತಿಯನ್ನಾಗಿ ಮಾಡಿದಾಗ ಮಾತ್ರ ದೇಶದ ಭವಿಷ್ಯ ಉನ್ನತವಾಗಲು ಸಾಧ್ಯ. ಆ ನಿಟ್ಟಿನಲ್ಲಿ ಪ್ರತಿಯೊಬ್ಬ ಶಿಕ್ಷಕರು, ಪಾಲಕರು ಶ್ರಮಿಸಬೇಕು ಎನ್ನುತ್ತಾರೆ ಡಾ. ಎಸ್.ಎಫ್. ಸಿದ್ನೇಕೊಪ್ಪ.

# ಜನ್ಮ ದಿನಾಚರಣೆಗಳು ದಾರಿ ತಪ್ಪುತ್ತಿವೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾಂಗ್ರೆಸ್ ಪಕ್ಷದ ಮಹಿಳಾ ಪ್ರಧಾನ ಕಾರ್ಯದರ್ಶಿ, ಜಿ.ಪಂ ಮಾಜಿ ಅಧ್ಯಕ್ಷೆ ಸುಜಾತ ದೊಡ್ಡಮನಿ ಗುರುವಾರ ಪಟ್ಟಣದ ಬಿ.ಡಿ ತಟ್ಟಿ ವಿಕಲಚೇತನ ಶಾಲೆಯ ಮಕ್ಕಳೊಂದಿಗೆ ತಮ್ಮ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿಕೊಂಡರು.

ಈ ವೇಳೆ ಅವರು ಮಕ್ಕಳಿಗೆ ನೋಟ್‌ಬುಕ್, ಪೆನ್, ಸಿಹಿ ಹಂಚಿ ಮಾತನಾಡಿ, ವಿಶೇಷ ಚೇತನ ಮಕ್ಕಳು ದೇವರ ಸಮಾನರಾಗಿದ್ದು ಆ ಮಕ್ಕಳ ಹಾರೈಕೆಯಿಂದ ಬದುಕು ಸುಂದರವಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಜನ್ಮ ದಿನಾಚರಣೆಗಳು ದಾರಿ ತಪ್ಪುತ್ತಿದ್ದು, ಈ ವೇಳೆ ನಮ್ಮ ಸಂಪ್ರದಾಯ, ಸಂಸ್ಕೃತಿ ಮರೆತು ಪಾಶ್ಚಾತ್ಯ ಸಂಸ್ಕೃತಿ, ಸಂಪ್ರದಾಯ ವೈಭವೀಕರಿಸಲಾಗುತ್ತಿದೆ. ಇದು ಉತ್ತಮ ಬೆಳವಣಿಗೆಯಲ್ಲ. ನಾವು ಮಾಡುವ ಯಾವುದೇ ಕೆಲಸದಿಂದ ಇನ್ನೊಬ್ಬರಿಗೆ ಸಹಾಯ-ಸಂತಸ ನೀಡಬೇಕು ಆಗ ಮಾತ್ರ ಆ ಕಾರ್ಯ, ಆಚರಣೆಗೊಂದು ಅರ್ಥ ಬರುತ್ತದೆ ಎಂದರು.

ಈ ವೇಳೆ ಮೋಹನ ನಂದೆಣ್ಣವರ, ಸದಾನಂದ ನಂದೆಣ್ಣವರ, ಮಾಂತೇಶ ಗುಡಸಲಮನಿ, ಪೃಥ್ವಿ ನಂದೆಣ್ಣವರ, ರಾಮು ಅಡಗಿಮನಿ, ಸಂತೋಷ ಹಾದಿಮನಿ, ನಿಂಗಪ್ಪ ಬಾಲಣ್ಣವರ, ಶಿವು ಅಯ್ಯಣ್ಣವರ, ವಸೀಂ ಮುಚ್ಚಾಲೆ, ಹನಮಂತ ಗುಡಿಸಲಮನಿ ಸೇರಿ ಹಲವರಿದ್ದರು.

# ಬಸವೇಶ್ವರ ಶಾಲೆಯಲ್ಲಿ ಕೆಂಪೇಗೌಡ ಜಯಂತಿ ಆಚರಣೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್



ಪಟ್ಟಣದ ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ಆಚರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳಿಗೆ ಭಾಷಣ, ಪ್ರಬಂಧ ಮತ್ತು ಚರ್ಚಾ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಮುಖ್ಯೋಪಾಧ್ಯಾಯೆ ಬಿ.ಜಿ. ಶಿರ್ಸಿಯವರು ಕೆಂಪೆಗೌಡರ ವ್ಯಕ್ತಿತ್ವ, ಆಡಳಿತ ವ್ಯವಸ್ಥೆ ಹಾಗೂ ಅವರು ಕೈಗೊಂಡ ಅಭಿವೃದ್ಧಿ ಕಾರ್ಯಗಳ ಕುರಿತು ಮಾತನಾಡಿದರು.

ಶಿಕ್ಷಕ ವೃಂದದ ಎಂ.ವಿ. ಕಡೆತೋಟದ, ಪೂರ್ಣಿಮಾ ಅಂಗಡಿ, ಎಸ್.ವಿ. ಹಿರೇಮಠ, ಎಸ್.ಕೆ ಕುಲಕರ್ಣಿ, ವಿ.ಪಿ. ಗ್ರಾಮಪುರೋಹಿತ, ಎಸ್. ಎಚ್. ಮಾನ್ವಿ, ಎಮ್.ಎಮ್. ಸಿಳ್ಳಿನ್, ಗೀತಾ ಶಿಂಧೆ, ಎನ್.ಜೆ. ಸಂಗನಾಳ, ಜೆ.ವಿ. ಕೆರಿಯವರ, ಅಕ್ಕಮಹಾದೇವಿ ಅಯ್ಯನಗೌಡ್ರ, ಕೆ.ಆಯ್. ಕೋಳಿವಾಡ, ಆಯ್.ಬಿ. ಒಂಟೇಲಿ, ರಾಜೇಶ್ವರಿ ಈಟಿ, ಗೀತಾ ಕಂಬಳಿ, ರಜಿಯಾಬೇಗಂ, ನಯನಾ ಜೋಳದ, ವಿದ್ಯಾ ಮುಗಳಿ, ಜಯಶ್ರೀ ಮೆಣಸಗಿ, ವೀಣಾ ಯಾಳಗಿ ಮುಂತಾದವರಿದ್ದರು.

**ಪುರಸಭೆ ಕಾರ್ಯಾಲಯ ಲಕ್ಷ್ಮೇಶ್ವರ**

ಜಿಲ್ಲೆ:ಗದಗ ದೂರವಾಣಿ: 08487-272916 ತಾ: ಲಕ್ಷ್ಮೇಶ್ವರ

ಇ-ಮೇಲ್: ka.laxmeshwar.tmc@gmail.com ವೈಬ್ ಸೈಟ್: laxmeshwar.mrc.gov.in

E- mail:ka.laxmeshwar.tmc@gmail.com Web: laxmeshwartown.mrc.gov.in

ಕ್ರ.ಸಂ/ಪುಸಲ/ತಾಂ.ವಿ/15ನೇ ಹಣಕಾಸು& ಎಸ್.ಎಫ್.ಸಿ/ಟೆಂಡರ-2/2024-25 ದಿನಾಂಕ:26-06-2024

**ಅಲ್ಪಾವಧಿ ಟೆಂಡರ ಪ್ರಕಟಣೆ 2ನೇ ಕರೆ (ಇ-ಪ್ರೋಕ್ಯೂರಮೆಂಟ್ ಮೂಲಕ)**

ಲಕ್ಷ್ಮೇಶ್ವರ ಪುರಸಭೆಯ ಸನ್ 2023-24 ನೇ ಸಾಲಿನ 15ನೇ ಹಣಕಾಸು ಸಾಮಾನ್ಯ ಮೂಲ ಅನುದಾನದಲ್ಲಿ 1 ಕಾಮಗಾರಿ ಅಂದಾಜು ಮೊತ್ತ ರೂ 25.30 ಲಕ್ಷ, ಸನ್ 2023-24 ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿಯಲ್ಲಿ 1 ಕಾಮಗಾರಿ ಅಂದಾಜು ಮೊತ್ತ ರೂ 10.93 ಹಾಗೂ ಎಸ್.ಎಫ್.ಸಿ ಶೇ.7.25 ರಷ್ಟು ಅನುದಾನದಲ್ಲಿ 1 ಕಾಮಗಾರಿ ಅಂದಾಜು ಮೊತ್ತ ರೂ.1.97 ಲಕ್ಷ, ಸನ್ 2021-22 ನೇ ಸಾಲಿನ 15ನೇ ಹಣಕಾಸು (NMPC's) ಅನುದಾನದಲ್ಲಿ 1 ಕಾಮಗಾರಿ ಅಂದಾಜು ಮೊತ್ತ ರೂ 29.50 ಲಕ್ಷ ಸನ್ 2023-24 ನೇ ಸಾಲಿನ ಪುರಸಭೆಯ ಆಯವ್ಯಯದಲ್ಲಿಯ 24.10% ರಷ್ಟು ಟಿ.ಎಸ್.ಪಿ ಯೋಜನೆಯಡಿ 1 ಕಾಮಗಾರಿ ಅಂದಾಜು ಮೊತ್ತ ರೂ 0.43 ಲಕ್ಷ ಒಟ್ಟು 5 ಕಾಮಗಾರಿಗಳ ಅಂದಾಜು ಮೊತ್ತ ರೂ. 68.13 ಲಕ್ಷಗಳಿಗೆ ಕೆ.ಟಿ.ಟಿ.ಪಿ ಕಾಯ್ದೆ ಅಧಿನಿಯಮ 2000 ರನ್ವಯ ಈ ಕೆಳಗಿನಂತೆ ಇಂಡಂಟ್‌ಗಳಲ್ಲಿ ಇ ಟೆಂಡರಗಳನ್ನು ಆಹ್ವಾನಿಸಿದ್ದು ಅರ್ಹ ಬಿಡ್‌ದಾರರು ಟೆಂಡರನ್ನು ಇ-ಪ್ರೋಕ್ಯೂರಮೆಂಟ್ ಪೋರ್ಟಲ್ https://kppp.karnataka.gov.in ಹಾಗೂ Website:www.lakmishwaratown.mrc.gov.in ಠೇವಣಿ (ಇಎಂಡಿ) ಮತ್ತು ಟೆಂಡರ ಫೀಯನ್ನು ಇ-ಪ್ರೋಕ್ಯೂರಮೆಂಟ್ ಪೋರ್ಟಲ್‌ನಲ್ಲಿ ಸೂಚಿಸಿದಂತೆ ಪಾವತಿಸಿ ಭಾಗವಹಿಸಬಹುದಾಗಿದೆ. ಟೆಂಡರ ಸಲ್ಲಿಸುವ ಕೊನೆಯ ದಿ:04-07-2024 ರ ಸಂಜೆ 4.00 ಗಂಟೆಯವರೆಗೆ ಟೆಂಡರ ದಿನಾಂಕಗಳನ್ನು ನಿಗಧಿಪಡಿಸಲಾಗಿದೆ. ಹಾಗೂ ಟೆಂಡರಗೆ ಸಂಬಂಧಿಸಿದ ಯಾವುದೆ ಬದಲಾವಣೆಗಳು ಅಥವಾ ತಿದ್ದುಪಡಿಗಳನ್ನು ಇ-ಪ್ರೋರ್ಟಲ್ ನಲ್ಲಿ ಪ್ರಕಟಿಸಲಾಗುವುದು.

| ಅ. ನಂ | ಕಾಮಗಾರಿಯ ಇಂಡಂಟ್ ವಿವರ | ಮೀಸಲಾತಿ ನೀಡಿದ ವಿವರ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|
| 1 | DMA/2023-24/WS/WORK_INDENT 13145/CALL-2 | OTHERS | 25.30 |
| 2 | DMA/2023-24/OW/WORK_INDENT 13110/CALL-2 | OTHERS | 1.97 |
| 3 | DMA/2023-24/RD/WORK_INDENT 14118/CALL-2 | OTHERS | 10.93 |
| 4 | DMA/2023-24/WS/WORK_INDENT 14027/CALL-2 | SC | 29.50 |
| 5 | DMA/2023-24/OW/WORK_INDENT 14214/CALL-2 | ST | 0.43 |

ಸಹಿ/- ಮುಖ್ಯಾಧಿಕಾರಿಗಳು ಪುರಸಭೆ ಲಕ್ಷ್ಮೇಶ್ವರ

ವಾ.ಸಾ.ಇ/ಗದಗ/45/ದೇಶಪಾಂಡೆಪಬ್ಲಿಸಿಟಿ/2024-25

ಸಹಿ/- ಆಡಳಿತಾಧಿಕಾರಿಗಳು ಪುರಸಭೆ ಲಕ್ಷ್ಮೇಶ್ವರ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka